ಸಂಪುಟ : 10 ಸಂಚಿಕೆ: 208 ಪುಟ : 4+2 ಬೆಲೆ: 3.00 ಶುಕ್ರವಾರ ಸೆಪ್ಟೆಂಬರ್ 26 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 208 Pages : 4+2 Price : 3.00 Friday September 26 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನೂತನ ಬಸ್ ಸೇವೆ ಆರಂಭ



■ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ರಾಮೀಣ ಭಾಗದ ಜನತೆಗೆ ಉತ್ತಮ ಸಾರಿಗೆ ಸೌಲಭ್ಯ ಸಿಗಬೇಕು ಎನ್ನುವ ಉದ್ದೇಶದಿಂದ ಶಾಸಕ ಜಿ.ಎಸ್. ಪಾಟೀಲರು, ಗದಗ ವಿಭಾಗಿಯ ಡಿಟಿಒ ಮತ್ತು ಅಧಿಕಾರಿಗಳ ಕಾಳಜಿಯಿಂದಾಗಿ ಬಸ್ ಸೌಲಭ್ಯ ಲಭ್ಯವಾಗಿರುವುದರಿಂದ ವಿದ್ಯಾರ್ಥಿಗಳಿಗೆ, ಮಹಿಳೆಯರಿಗೆ ಹಿರಿಯ ನಾಗರಿಕರಿಗೆ ಪ್ರಯಾಣ ಸುಲಭವಾಗಿದೆ ಎಂದು ಹಿರಿಯ ಮುಖಂಡ ರಾಮಣ್ಣ ಸೋಮಪ್ಪ ಮೇಗಲಮನಿ ಹೇಳಿದರು.

ಡಂಬಳ ಹೋಬಳಿಯ ಅತ್ತಿಕಟ್ಟಿ ಭಾಗದಲ್ಲಿ ಸಂಚಾರ ಪ್ರಾರಂಭಿಸಿದ ನೂತನ ಬಸ್‌ಗೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಅತ್ತಿಕಟ್ಟಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಗೆ ನೂತನ ಬಸ್ ಸೇವೆಯಿಂದ ಅನೂಕಲಕರವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಲಕ್ಷ್ಮೇಶ್ವರದಿಂದ ರಾತ್ರಿ 7.15ಕ್ಕೆ ಹೊರಟು ಸೊರಟೂರ ಮಾರ್ಗವಾಗಿ 9 ಗಂಟೆಗೆ ಅತ್ತಿಕಟ್ಟಿ ಗ್ರಾಮಕ್ಕೆ ತಲುಪಿ ರಾತ್ರಿ ವಸತಿ ಇರಲಿದೆ. ಮುಂಜಾನೆ 6.45 ಗಂಟೆಗೆ ಮರಳಿ ಸೊರಟೂರ ಮಾರ್ಗವಾಗಿ ಶಿರಹಟ್ಟಿ ತಲುಪಲಿದೆ. ಇನ್ನೊಂದು ಬಸ್ ಗದಗದಿಂದ ಮಧ್ಯಾಹ್ನ 3.30 ಗಂಟೆಗೆ ಹೊರಟು ಕದಾಂಪುರ ಮತ್ತು ಡೋಣಿ–ಡೋಣಿತಾಂಡ ಮಾರ್ಗವಾಗಿ 4.30ಕ್ಕೆ ಅತ್ತಿಕಟ್ಟಿ ಗ್ರಾಮಕ್ಕೆ ತಲುಪಿ ಮತ್ತೆ ಅದೇ ಮಾರ್ಗವಾಗಿ ಗದಗ ನಗರವನ್ನು ತಲುಪಲಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಡಿ.ಡಿ. ಮೋರನಾಳ, ರಮೇಶ ಹೈಗರ, ಗ್ರಾ.ಪಂ ಸದಸ್ಯ ರಮೇಶ ಪವಾರ, ಗ್ರಾ.ಪಂ ಉಪಾಧ್ಯಕ್ಷೆ ಶಾಂತವ್ವ ಹೈಗರ, ಸೋಮಶೇಖರ ಕಾರಭಾರಿ, ಸಕ್ಕುಭಾಯಿ ಕಾರಭಾರಿ, ರಾಮಪ್ಪ ಅದರಕಟ್ಟಿ, ಈರಪ್ಪ ಹಿತ್ತಲಮನಿ, ನಿಂಗಪ್ಪ ಮಳ್ಳನವರ, ರುದ್ರಗೌಡ ಪಾಟೀಲ, ಗುಡದಪ್ಪ ತೆಳಗಡೆ, ಮಾಂತೇಶ ಚವ್ಹಾಣ, ಅತ್ತಿಕಟ್ಟಿ ಗ್ರಾಮಸ್ಥರು ಇದ್ದರು.

### ವಿಶ್ವ ಔಷಧ ತಜ್ಞರ ದಿನಾಚರಣೆ, ಹಿರಿಯ ಔಷಧ ತಜ್ಞರಿಗೆ ಸನ್ಮಾನ ಕಾರ್ಯಕ್ರಮ

# ಔಷಧ ವ್ಯಾಪಾರಿಗಳ ಸೇವೆ ಅನುಪಮ

■ವಿಜಯಸಾಕ್ಷಿ ಸುದ್ದಿ, ಗದಗ

ಆರೋಗ್ಯಕರ ಸಮಾಜ ನಿರ್ಮಾಣ ಮಾಡುವ ಮೂಲಕ ಜನಮುಖಿಯಾಗಿ ಕಾರ್ಯ ಮಾಡುತ್ತಿರುವ ಔಷಧ ವ್ಯಾಪಾರಿಗಳ ಸೇವೆ ಅನುಪಮವಾದದ್ದು ಎಂದು ಕರ್ನಾಟಕ ರಾಜ್ಯ ಔಷಧ ವ್ಯಾಪಾರಿಗಳ ಸಂಘದ ಅಧ್ಯಕ್ಷ ರಘುನಾಥ ರೆಡ್ಡಿ ಹೇಳಿದರು.

ಅವರು ಗುರುವಾರ ಎಸ್.ಬಿ.ಎಸ್ ಗಾರ್ಡನ್‌ನಲ್ಲಿ ಕರ್ನಾಟಕ ರಾಜ್ಯ ಔಷಧ ವ್ಯಾಪಾರಿಗಳ ಸಂಘ ಬೆಂಗಳೂರು, ಗದಗ ಜಿಲ್ಲಾ ಔಷಧ ವ್ಯಾಪಾರಿಗಳ ಸಂಘ ಏರ್ಪಡಿಸಿದ್ದ 'ವಿಶ್ವ ಔಷಧ ತಜ್ಞರ ದಿನಾಚರಣೆ', ನಿರಂತರ ಕಲಿಕಾ ಕಾರ್ಯಕ್ರಮ ಮತ್ತು ಹಿರಿಯ ಔಷಧ ತಜ್ಞರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಔಷಧ ತಜ್ಞರಿಗೆ ಮುಖ್ಯವಾಗಿ ತಾಳ್ಮೆ, ಸಹನೆ, ಮಾನವೀಯತೆ ಹಾಗೂ ಸಹಕಾರ ಮನೋಭಾವ ಇರುವದು ಅವಶ್ಯ. ಇಂತಹ ಗುಣಗಳುಳ್ಳ ವ್ಯಕ್ತಿ ಖ್ಯಾತಿಯನ್ನು ಮತ್ತು ಸಂತೃಪ್ತಿಯನ್ನು ಹೊಂದಬಲ್ಲ ಎಂದರು.

ಹುಬ್ಬಳ್ಳಿಯ ಪ್ರಾದೇಶಿಕ ಕಚೇರಿಯ ಉಪ ಔಷಧ ನಿಯಂತ್ರಕ ಬಸವರಾಜ ಆಸಂಗಿ ಮಾತನಾಡಿ, ಫಾರ್ಮಾಸಿಸ್ಟ್‌ಗಳ ಕಾರ್ಯ ಶ್ಲಾಘನೀಯ. 24 ಗಂಟೆಯೂ ನಿರಂತರವಾಗಿ ಸೇವೆ ಮಾಡುತ್ತ ಜನರ ಆರೋಗ್ಯ, ಸಮಾಜದ ಸ್ವಾಸ್ಥ್ಯ ಕಾಪಾಡುತ್ತಿರುವದು ಅಭಿನಂದನೀಯ ಎಂದರು.




ಕರ್ನಾಟಕ ರಾಜ್ಯ ಔಷಧ ವ್ಯಾಪಾರಿಗಳ ಸಂಘದ ಕಾರ್ಯದರ್ಶಿ ವ್ಹಿ.ಕೆ. ಜೀವನ್ ಮಾತನಾಡಿ, ಇಂದಿನ ದಿನಗಳು ಸ್ಪರ್ಧಾತ್ಮಕ ದಿನಗಳಾಗಿದ್ದು, ಫಾರ್ಮಾಸಿಸ್ಟ್‌ಗಳು ತಮ್ಮ ಮಕ್ಕಳಿಗೆ ವೈದ್ಯಕೀಯ ಶಿಕ್ಷಣ ನೀಡುವ ಮೂಲಕ ತಮ್ಮ ವೃತ್ತಿಯನ್ನು ಇನ್ನಷ್ಟು ಅಭಿವೃದ್ಧಿಪಡಿಸಿಕೊಳ್ಳಲು ಅವಕಾಶಗಳಿವೆ ಎಂದರು.

ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ತಾತನಗೌಡ ಪಾಟೀಲ ಮಾತನಾಡಿ, ಗದಗ ಜಿಲ್ಲೆಯಲ್ಲಿ ಔಷಧ ವ್ಯಾಪಾರಿಗಳ ಸಂಘಟನೆ ಉತ್ತಮವಾಗಿ ಬೆಳೆದು ಬಂದಿದ್ದು, ಗದುಗಿನಲ್ಲಿ ಉದ್ದೇಶಿತ 'ಔಷಧ ಭವನ' ನಿರ್ಮಾಣಕ್ಕೆ ರಾಜ್ಯ ಸಂಘಟನೆಯಿಂದ 3 ಲಕ್ಷ ರೂ.ಗಳ ಆರ್ಥಿಕ ನೆರವು ನೀಡಲು ಅವಕಾಶವಿದೆ. ಅದನ್ನು ಸದುಪಯೋಗ ಮಾಡಿಕೊಳ್ಳಿ ಎಂದರು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಔಷಧ ವ್ಯಾಪಾರಿಗಳ ಸಂಘದ ಅಧ್ಯಕ್ಷ ರಾಮನಗೌಡ ದಾನಪ್ಪಗೌಡ್ರ ಮಾತನಾಡಿ, ಗದುಗಿನಲ್ಲಿ ಔಷಧ ಭವನ ನಿರ್ಮಾಣಕ್ಕೆ ಭೂಮಿಯನ್ನು ಗುರುತಿಸಲಾಗಿದ್ದು, ದಾನಿಗಳ ಸಹಕಾರದೊಂದಿಗೆ ಈ ಕಾರ್ಯ ಪೂರ್ಣಗೊಳಿಸುವದಾಗಿ ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಶಿರೋಳ, ಭೈರನಹಟ್ಟಿಯ ತೋಂಟದಾರ್ಯ ಶಾಖಾ ಮಠದ ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು ಮಾತನಾಡಿ, ಜನಸಾಮಾನ್ಯರ ದೃಷ್ಟಿಯಲ್ಲಿ ಔಷಧ ವ್ಯಾಪಾರಿಗಳೇ ವೈದ್ಯರು. ನಿತ್ಯದ ಕಾಯಕದಿಂದ ನೈಪುಣ್ಯತೆ ಬೆಳೆಸಿಕೊಂಡಿದ್ದಾರೆ ಎಂದರು.

ಅತಿಥಿಗಳಾಗಿ ಕರ್ನಾಟಕ ರಾಜ್ಯ ಔಷಧ ವ್ಯಾಪಾರಿಗಳ ಸಂಘದ ಗದಗ ಜಿಲ್ಲಾ ಪ್ರತಿನಿಧಿ ಮಾಲತೇಶ ರಮಾಣಿ, ಕರ್ನಾಟಕ ರಾಜ್ಯ ಔಷಧ ವ್ಯಾಪಾರಿಗಳ ಸಂಘ ಸದಸ್ಯ ಮಹಾದೇವಗೌಡ ಲಿಂಗನಗೌಡ್ರ, ರಾಜ್ಯ ಔಷಧ ವ್ಯಾಪಾರಿಗಳ ಸಂಘದ ಬಿ.ಮಂಜುನಾಥ ರೆಡ್ಡಿ ಪಾಲ್ಗೊಂಡಿದ್ದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಮಾತನಾಡಿ, ಔಷಧ ತಜ್ಞರು ಜನಸಾಮಾನ್ಯರ ದೃಷ್ಟಿಯಲ್ಲಿ ವೈದ್ಯರಾಗಿದ್ದಾರೆ. ಆರೋಗ್ಯದ ಸಣ್ಣ ಪುಟ್ಟ ಸಮಸ್ಯೆಗಳಿಗೆ ಔಷಧ ನೀಡಿ ಜನರ ಆರೋಗ್ಯ ಕಾಪಾಡುತ್ತಾರೆ. ಆದಾಗ್ಯೂ, ತಜ್ಞ ವೈದ್ಯರ ಸಲಹೆ ಅಗತ್ಯ ಎಂದರು.

ಹಿರಿಯ ಔಷಧ ತಜ್ಞರಾದ ರಾಧಾ ದೀಪಾಲಿ, ಹನಮಂತಗೌಡ ಪಾಟೀಲ, ಮಲ್ಲಪ್ಪ ಕಾಬಳ್ಳಿ, ನಿಂಗಪ್ಪ ದೇಸಾಯಿ, ರಾಜಣ್ಣ ತ್ರಿಮಲ್ಲೆ, ಈರಣ್ಣ ಕಪ್ಪರಶೆಟ್ಟಿ, ಪಂಚಾಕ್ಷರಪ್ಪ ಅಂಗಡಿ, ರವೀಂದ್ರನಾಥ ಆನೇಗುಂದಿ, ರಮಜಾನ್‌ಸಾಹೇಬ ನದಾಫ್, ಸುನೀಲ ಪತ್ತೇಪೂರ, ಭೀಮರೆಡ್ಡೆಪ್ಪ ಪರಡ್ಡಿ, ಮಲ್ಲಿಕಾರ್ಜುನ ನರೇಗಲ್ಲ, ಸುರೇಶ ನವಲಿ, ವೀರಭದ್ರಪ್ಪ ಪಾಗಿ, ಸಂಗಪ್ಪ ಹೂಗಾರ, ಜಗನ್ನಾಥ ಅಳವಂಡಿ, ಅನುಷಾ ಕುಲಕರ್ಣಿ, ಪವನ ನರಗುಂದ, ತೋಟಪ್ಪ ಹಾವೇರಿ, ಬಸಯ್ಯ ಮಠಪತಿ, ಶಿವರುದ್ರಪ್ಪ ಮಲ್ಲಾಡದ ಅವರನ್ನು ದಂಪತಿ ಸಮೇತ ಸನ್ಮಾನಿಸಲಾಯಿತು. ಮಹೇಶ ಕುಂದ್ರಾಳಹಿರೇಮಠ, ಬಸವರಾಜ ದೊಡ್ಡಮನಿ, ಖಾಜೇಸಾಬ ಬೂದಿಹಾಳ ಪ್ರಾರ್ಥಿಸಿದರು. ನಾಗೇಶ ಹುಬ್ಬಳ್ಳಿ ಸ್ವಾಗತಿಸಿದರು. ಮಹಾಂತೇಶ ಸಾಲಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ. ಬಾಹುಬಲಿ ಜೈನರ್ ನಿರೂಪಿಸಿದರು. ಕಾರ್ಯದರ್ಶಿ ಜ್ಞಾನೇಶ್ವರ ಖೋಕಲೆ ವಂದಿಸಿದರು.

# ಯರಿಕೊಪ್ಪ ಕಳ್ಳತನ ಪ್ರಕರಣದ ಆರೋಪಿಗಳ ಪತ್ತೆ


■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ತಾಲೂಕಿನ ಯರಿಕೊಪ್ಪ ಗ್ರಾಮದ ಹದ್ದಿಯ ಬಸಪ್ಪ ಯಲ್ಲಪ್ಪ ಸೂರ್ಯವಂಶಿ ಇವರ ಜಮೀನಿನಲ್ಲಿ ಅಳವಡಿಸಿದ್ದ ರಿಲೈನ್ಸ್ ಕಂಪನಿಯ ಮೊಬೈಲ್ ಟವರಿನ ಒಟ್ಟು 1,31,206 ರೂ ಕಿಮ್ಮತಿನ ಸ್ಯಾಮಸಂಗ್ ಕಂಪನಿಯ ಆರ್‌ಆರ್‌ಎಚ್ ರೆಡಿಯೋ ಹೆಡ್ ಕಳ್ಳತನಕ್ಕೆ ಸಂಬಂಧಿಸಿ ಮೂವರು ಆರೋಪಿಗಳನ್ನು ಪತ್ತೆಹಚ್ಚುವಲ್ಲಿ ಪೊಲೀಸರು



ಯಶಸ್ವಿಯಾಗಿದ್ದಾರೆ.

ಆರೋಪಿತರನ್ನು ದಸ್ತಗೀರ ಮಾಡಿ ಕಾನೂನು ಕ್ರಮವನ್ನು ಜರುಗಿಸಿ ಆರೋಪಿತರಿಂದ ಕಳ್ಳತನ ಮಾಡಲಾದ 4 ಸ್ಯಾಮಸಂಗ್ ಕಂಪನಿಯ ಆರ್.ಆರ್.ಹೆಚ್ ರೆಡಿಯೋ ಹೆಡ್ 2300 ಮತ್ತು 1800 ಎಮ್.ಹೆಚ್.ಜೆಡ್ ಬ್ಯಾಂಡ್ ಹಾಗೂ ಒಂದು ಬೈಕನ್ನು ವಶಪಡಿಸಿಕೊಳ್ಳಲಾಗಿದೆ. ಪ್ರಕರಣ ದಾಖಲಾದ 24 ಗಂಟೆಯೊಳಗೆ ಕ್ಷಿಪ್ರಗತಿಯಲ್ಲಿ ಆರೋಪಿತರನ್ನು ಬಂಧಿಸುವಲ್ಲಿ ಧಾರವಾಡ ಗ್ರಾಮೀಣ ಪಿಐ ಎಸ್.ಎಸ್. ಕಮತಗಿ ಹಾಗೂ ಎಲ್&ಓ ಪಿ.ಎಸ್.ಐ ಪ್ರವೀಣ ಕೋಟಿ, ಪಿ.ಎಸ್.ಐ(ಅ) ಬಿ.ಆರ್. ಬಂಕಾಪೂರ, ಸಿಬ್ಬಂದಿಗಳಾದ ಕುಮಾರ ಕಾಂಬಳೆ, ಎ.ಬಿ. ಸೊರಟೂರ, ಎಮ್.ಎಸ್. ಜೊಡಗೇರಿ, ಮಾರುತಿ ಕುಂಬಾರ, ಮಹಾಂತೇಶ ನೆಟಗಲ್, ಶ್ರೀಧರ ಗುಗ್ಗರಿ, ಶಿದ್ದೇಶ್ವರ ಹಿರೇಮಠ, ಮಲ್ಲಪ್ಪ ಡಾಬೋಳಿ ಹಾಗೂ ವಿನಾಯಕ ಪಡಸಲಗಿ ಇವರನ್ನು ಒಳಗೊಂಡ ತಂಡ ಆರೋಪಿತರನ್ನು ಪತ್ತೆ ಮಾಡುವಲ್ಲಿ ಯಶಸ್ವಿಯಾಗಿದ್ದು, ಪತ್ತೆ ಕಾರ್ಯಕ್ಕೆ ಹಿರಿಯ ಅಧಿಕಾರಿಗಳು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.



## ಸಾಕ್ಷಿ ಸುಭಾಷಿತ

ನಾನು ಸುಂದರವಾದ ಹುಡುಗನಲ್ಲ. ಆದರೆ ಸಹಾಯಕ್ಕಾಗಿ ಯಾರಾದರೂ ಕೈಚಾಚಿದರೆ ನಾನು ಸಹಾಯ ಮಾಡಬಲ್ಲೆ. ಸೌಂದರ್ಯ ಮನಸ್ಸಲ್ಲಿದೇ ಹೊರತು ಮುಖದಲ್ಲಿಲ್ಲ...

– ಡಾ.ಎ.ಪಿ.ಜೆ.ಅಬ್ದುಲ್ ಕಲಾಂ

## ಸಂಪಾದಕೀಯ

### ಸಿವಿಲ್ ವಿವಾದಗಳಲ್ಲಿ ಪೊಲೀಸರ ಹಸ್ತಕ್ಷೇಪ: ಸುಪ್ರೀಂ ಆದೇಶದ ಮರುಪರಿಶೀಲನೆ

ಕಾನೂನು ಸುವ್ಯವಸ್ಥೆ ಮತ್ತು ಅಪರಾಧಗಳ ತಡೆಗಟ್ಟುವಿಕೆಗೆ ಮೀಸಲಾಗಿರುವ ಪೊಲೀಸ್ ಇಲಾಖೆ, ಇತ್ತೀಚೆಗೆ ಸಿವಿಲ್ ವ್ಯಾಜ್ಯಗಳಲ್ಲೂ ಅತಿಯಾಗಿ ತಲೆ ಹಾಕುತ್ತಿದೆ ಎಂಬ ದೂರುಗಳು ವ್ಯಾಪಕವಾಗಿ ಕೇಳಿ ಬರುತ್ತಿವೆ.

ಆಸ್ತಿ, ಹಣಕಾಸು ಅಥವಾ ಕೌಟುಂಬಿಕ ವಿವಾದಗಳಂತಹ ಸಿವಿಲ್ ಪ್ರಕರಣಗಳಲ್ಲಿ ಪೊಲೀಸರು ಹಸ್ತಕ್ಷೇಪ ಮಾಡಬಾರದು ಎಂದು ಸುಪ್ರೀಂ ಕೋರ್ಟ್ ಮತ್ತು ವಿವಿಧ ಹೈಕೋರ್ಟ್‌ಗಳು ಪದೇ ಪದೇ ಸ್ಪಷ್ಟಪಡಿಸಿ, ಖಡಕ್ ಆದೇಶಗಳನ್ನು ನೀಡಿವೆ.

ಈ ಆದೇಶಗಳನ್ನು ಉಲ್ಲಂಘಿಸಿದ ಹಲವಾರು ಅಧಿಕಾರಿಗಳ ವಿರುದ್ಧ ನ್ಯಾಯಾಲಯಗಳು ಕ್ರಮವನ್ನೂ ತೆಗೆದುಕೊಂಡಿವೆ.

ನ್ಯಾಯಾಲಯದ ಸೂಚನೆಗಳಿದ್ದರೂ, ಕೆಲವು ಪೊಲೀಸ್ ಅಧಿಕಾರಿಗಳು ಅಧಿಕಾರ ವ್ಯಾಪ್ತಿಯನ್ನು ಮೀರಿ ಸಿವಿಲ್ ಪ್ರಕರಣಗಳಲ್ಲಿ ಮಧ್ಯ ಪ್ರವೇಶಿಸಿ, ಕೆಲವೊಮ್ಮೆ ಅಧಿಕಾರ ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ ಎಂಬ ಆರೋಪವಿದೆ. ಇದು ನಾಗರಿಕರ ಮೂಲಭೂತ ಹಕ್ಕುಗಳಿಗೆ ಧಕ್ಕೆ ತರುವುದಲ್ಲದೆ, ನ್ಯಾಯಾಂಗ ವ್ಯವಸ್ಥೆಯ ಮೇಲಿನ ನಂಬಿಕೆಯನ್ನೂ ಕಡಿಮೆ ಮಾಡುತ್ತದೆ.


ಈ ಹಿನ್ನೆಲೆಯಲ್ಲಿ, ಪೊಲೀಸ್ ಮಹಾ ನಿರ್ದೇಶಕರಾದ ಸಲೀಂ ಅವರು ತಮ್ಮ ಇಲಾಖೆಯ ಸಿಬ್ಬಂದಿಗೆ ಸಿವಿಲ್ ವ್ಯಾಜ್ಯಗಳಲ್ಲಿ ಹಸ್ತಕ್ಷೇಪ ಮಾಡದಂತೆ ಸ್ಪಷ್ಟ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿರುವುದು ಸ್ವಾಗತಾರ್ಹ ಬೆಳವಣಿಗೆ. ಈ ಮಾರ್ಗಸೂಚಿಗಳು ಕೇವಲ ಕಾಗದದ ಮೇಲೆ ಉಳಿಯದೆ, ಕೆಳ ಹಂತದ ಪೊಲೀಸ್ ಠಾಣೆಗಳಲ್ಲೂ ಕಟ್ಟುನಿಟ್ಟಾಗಿ ಜಾರಿಯಾಗಬೇಕು.

ಸಿವಿಲ್ ವಿವಾದಗಳನ್ನು ಬಗೆಹರಿಸಲು ಕಂದಾಯ ಇಲಾಖೆ, ನ್ಯಾಯಾಲಯಗಳು ಮತ್ತು ಸಿವಿಲ್ ನ್ಯಾಯ ವ್ಯವಸ್ಥೆ ಇದೆ. ಪೊಲೀಸರು ಕೇವಲ ಕ್ರಿಮಿನಲ್ ಅಂಶಗಳಿರುವ ಸಂದರ್ಭಗಳಲ್ಲಿ ಮಾತ್ರವೇ ಮಧ್ಯಪ್ರವೇಶಿಸಬೇಕು.

ಡಿಜಿಪಿ ಅವರ ಈ ಹೊಸ ಆದೇಶವು ಪೊಲೀಸ್ ಇಲಾಖೆಯು ತನ್ನ ಮೂಲ ಕರ್ತವ್ಯಗಳಿಗೆ ಮರಳಲು ಮತ್ತು ನಾಗರಿಕರಿಗೆ ನ್ಯಾಯಯುತ ಸೇವೆ ಸಲ್ಲಿಸಲು ಪ್ರೇರಣೆಯಾಗಲಿ ಎಂದು ಆಶಿಸೋಣ. ನ್ಯಾಯಾಲಯದ ಆದೇಶಗಳಿಗೆ ಗೌರವ ನೀಡುವುದು ಮತ್ತು ನಿಯಮಗಳನ್ನು ಪಾಲಿಸುವುದು ಪೊಲೀಸ್ ಇಲಾಖೆಯ ನೈತಿಕ ಮತ್ತು ಕಾನೂನು ಬದ್ಧ ಜವಾಬ್ದಾರಿಯಾಗಿದೆ.

**ಜಾತಿ ಗುರುತನ್ನು ಹಂತ ಹಂತವಾಗಿ ಕಡಿಮೆ ಮಾಡುತ್ತಾ ಅಂತಿಮವಾಗಿ ಅಳಿಸಲೇಬೇಕು**

# ಜಾತ್ಯಾತೀತ ರಾಷ್ಟ್ರಕ್ಕೆ ಜಾತಿ ಯಾಕೆ?




ಭಾರತವನ್ನು ನಾವು ಸಂವಿಧಾನದ ಪ್ರಸ್ತಾವನೆಯಲ್ಲೇ ಸಾರ್ವಭೌಮ, ಸಮಾಜವಾದಿ, ಧರ್ಮನಿರಪೇಕ್ಷ, ಪ್ರಜಾಸತ್ತಾತ್ಮಕ ಗಣರಾಜ್ಯ ಎಂದು ಘೋಷಿಸಿದ್ದೇವೆ. ಇದರಿಂದ ಭಾರತದ ಆತ್ಮವೇ ಜಾತ್ಯಾತೀತತೆ ಅಥವಾ ಧರ್ಮನಿರಪೇಕ್ಷತೆಯ ಮೇಲೆ ನಿಂತಿದೆ ಎಂದು ಹೇಳಬಹುದು. ಆದರೆ ವಾಸ್ತವಿಕ ಜೀವನದಲ್ಲಿ ಧರ್ಮ, ಮತ, ಪಂಗಡ, ಹಾಗೂ ಮುಖ್ಯವಾಗಿ ಜಾತಿ ಎಲ್ಲವೂ ನಮ್ಮ ಸಮಾಜದ ಪ್ರತಿಯೊಂದು ಅಸ್ತಿತ್ವದಲ್ಲೂ ಇನ್ನೂ ಆಳವಾಗಿ ಬೇರೂರಿದೆ. ಇನ್ನೂ ನೆಲದಮಟ್ಟದಲ್ಲಿ ನೋಡಿದರೆ, ಜಾತಿ ಎನ್ನುವ ಹಳೆಯ ಬಂಡಿ ಇನ್ನೂ ಚಲಿಸುತ್ತಲೇ ಇದು ಜಾತ್ಯಾತೀತ ರಾಷ್ಟ್ರದ ವ್ಯಂಗ್ಯಚಿತ್ರವಲ್ಲವೇ?

ಇಲ್ಲಿ ಒಂದು ಮೂಲಭೂತ ಪ್ರಶ್ನೆ ಉದ್ಭವಿಸುತ್ತದೆ. ಜಾತ್ಯಾತೀತ ರಾಷ್ಟ್ರ ಎನ್ನುವ ಭಾರತದಲ್ಲಿ ಇನ್ನೂ ಜಾತಿ ಬೇಕೆ ಅಥವಾ ಜಾತಿ ಸಮಾಜದ ಅವಿಭಾಜ್ಯ ಅಂಗವೇ? ಈ ಪ್ರಶ್ನೆ ಕೇವಲ ಸಮಾಜಶಾಸ್ತ್ರೀಯ ಸಮಸ್ಯೆಯಲ್ಲ. ಇದು ರಾಜಕೀಯ, ಕಾನೂನು, ನ್ಯಾಯ, ಶಿಕ್ಷಣ, ಆರ್ಥಿಕತೆ, ಮೌಲ್ಯಗಳು, ಮತ್ತು ವ್ಯಕ್ತಿಯ ಅಸ್ತಿತ್ವದ ಮೂಲವನ್ನು ಸವಾಲು ಹಾಕುವಂತಹ ಪ್ರಶ್ನೆಯಾಗಿ ಪರಿಣಮಿಸುತ್ತದೆ.

ಭಾರತದ ಜಾತಿ ವ್ಯವಸ್ಥೆಗೆ ಸಹಸ್ರಾರು ವರ್ಷಗಳ ಇತಿಹಾಸವಿದೆ. ವೇದಕಾಲೀನ ವರ್ಣವ್ಯವಸ್ಥೆ, ಉಪಜಾತಿ ಮತ್ತು ಕುಲಗಳು, ಅಸ್ಪೃಶ್ಯತೆ ಇತ್ಯಾದಿಗಳಿದ್ದವು. ಭಕ್ತಿಯುಗದ ಚಳವಳಿಗಳು ಜಾತಿಯ ವಿರುದ್ಧ ಧ್ವನಿ ಎತ್ತಿದರೂ, ಜಾತಿ ಸಂಪೂರ್ಣ ಮಾಯವಾಗಲಿಲ್ಲ. ಹೀಗಾಗಿ ಜಾತಿ ವ್ಯವಸ್ಥೆ ಕೇವಲ ಧಾರ್ಮಿಕವಲ್ಲ, ಅದು ಸಾಮಾಜಿಕ, ಆರ್ಥಿಕ, ಹಾಗೂ ಸಾಂಸ್ಕೃತಿಕ ಮೂಲ ಹೊಂದಿರುವ ವ್ಯವಸ್ಥೆಯಾಗಿ ನಿರ್ಮಾಣವಾಗಿದೆ.

ಆದರೆ ನೆಲದಮಟ್ಟದಲ್ಲಿ ಸ್ಥಿತಿ ಬೇರೆಯಾಗಿದೆ. ರಾಜಕೀಯದಲ್ಲಿ ಜಾತಿ ಮತದಾನದ ಪ್ರಮುಖ ಅಸ್ತ್ರ. ಅಭ್ಯರ್ಥಿಗಳ ಆಯ್ಕೆ, ಚುನಾವಣಾ ಪ್ರಚಾರ, ಮತಗಟ್ಟೆ ಗಣಿತ ಎಲ್ಲವೂ ಜಾತಿ ಆಧಾರಿತ. ಮದುವೆಗಳು ಇನ್ನೂ ಜಾತಿ ಆಧಾರಿತ. ಮೀಸಲಾತಿ ವ್ಯವಸ್ಥೆ ಜಾತಿ ಆಧಾರದ ಮೇಲೆ ಇದೆ. ಸಾವಿರಾರು ವರ್ಷಗಳಿಂದ ಬಂದಿರುವ ಪದ್ಧತಿ ತಕ್ಷಣವೇ ಮಾಯವಾಗುವುದಿಲ್ಲ. ಜನರು ತಮ್ಮ ಜಾತಿಯನ್ನು ಗುರುತಿನ ಚಿಹ್ನೆಯಂತೆ ಸ್ವೀಕರಿಸಿದ್ದಾರೆ. ಜಾತಿ ಗುರುತುಗಳನ್ನು ಬಳಸಿಕೊಂಡು ನಾಯಕರು ಅಧಿಕಾರ ಹಿಡಿಯುತ್ತಾರೆ.

ಸರ್ಕಾರಗಳು ಒಂದು ಕಡೆ ಸಮಾನತೆ, ಸಹೋದರತ್ವ ಎಂದು ಪಾಠ ಮಾಡುತ್ತವೆ. ಆದರೆ ಇನ್ನೊಂದು ಕಡೆ ಚುನಾವಣೆಗಳಲ್ಲಿ ಅಭ್ಯರ್ಥಿಗಳ ಆಯ್ಕೆ ಜಾತಿ ಅಂಕಗಣಿತದ ಮೇಲಾಗಿರುತ್ತದೆ. ಜನರಿಗೆ ಸಮಾನತೆ ಕೊಡಬೇಕಾದ ರಾಜಕೀಯವೇ ಜಾತಿ ಹೆಸರಿನ ಹೊತ್ತಿಗೆಯನ್ನು ತನ್ನ ಬೆನ್ನಿಗೆ ಹೊತ್ತುಕೊಂಡು ಕುಳಿತಿದೆ.

ಒಂದು ಕಡೆ ಅಸ್ಪೃಶ್ಯತೆ ರದ್ದು ಎಂದು ಸಂವಿಧಾನ ಹೇಳುತ್ತದೆ. ಆದರೆ ಇನ್ನೊಂದು ಕಡೆ ದಲಿತರ ಮೇಲೆ ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಲೇ ಇವೆ. ರಾಷ್ಟ್ರೀಯ ಅಪರಾಧ ದಾಖಲೆ ಕಚೇರಿ (NCRB) 2023ರ ವರದಿ ಪ್ರಕಾರ, ದಲಿತರ ಮೇಲಿನ ಹಿಂಸಾಚಾರದ ಪ್ರಕರಣಗಳು ಹಿಂದಿನ ವರ್ಷಕ್ಕಿಂತ ಶೇ.13ರಷ್ಟು ಹೆಚ್ಚಿವೆ. ಹೀಗಿರುವಾಗ, ಸರ್ಕಾರ ಜಾತ್ಯಾತೀತತೆ ಬಗ್ಗೆ ಮಾಡಿದ ಘೋಷಣೆ ಖಾಲಿ ಘೋಷಣೆ ಆಗಿ ಉಳಿದಂತಾಗುವುದಿಲ್ಲವೇ?

ಜಾತಿಯ ಹಾನಿಕರ ಪರಿಣಾಮಗಳ ಬಗ್ಗೆ ಅರಿವು, ರಾಜಕೀಯ ಸುಧಾರಣೆ, ಸಮಾನ ಅವಕಾಶಗಳು, ಸಾಂಸ್ಕೃತಿಕ ಪರಿವರ್ತನೆಯೊಂದಿಗೆ ಹೊಸ ಪೀಳಿಗೆ ಜಾತಿ ವಿರುದ್ಧ ಧ್ವನಿ ಎತ್ತಬೇಕು. ಅಂದಾಗ ಮಾತ್ರ ನಮ್ಮ ದೇಶದಿಂದ ಜಾತಿ-ಜಾತಿ ಎಂದು ಬಡಿದಾಡುಕೊಳ್ಳುವ ಸಂಸ್ಕೃತಿ ಮರೆಯಾಗಲು ಸಹಕಾರಿಯಾಗುತ್ತದೆ.


ಭಾರತ ಜಾತ್ಯಾತೀತ ರಾಷ್ಟ್ರ ಎನ್ನಿಸಿಕೊಂಡರೂ, ಜಾತಿ ಎಂಬ ಅಂಶ ನಮ್ಮ ಸಮಾಜದಲ್ಲಿ ಬಲಿಷ್ಠವಾಗಿ ಉಳಿದುಕೊಂಡಿದೆ. ಜಾತಿ ಸಂಪೂರ್ಣ ಅಳಿಯದವರೆಗೂ ನಿಜವಾದ ಜಾತ್ಯಾತೀತತೆ ಸಾಧ್ಯವಿಲ್ಲ. ಆದರೆ ಸಾಮಾಜಿಕ ನ್ಯಾಯ ಸಾಧಿಸಲು, ಕೆಲವು ಮಟ್ಟದಲ್ಲಿ ಜಾತಿ ಗುರುತನ್ನು ಬಳಸುವುದು ಅನಿವಾರ್ಯ. ಜಾತಿಯ ಶೋಷಣಾತ್ಮಕ ರೂಪವನ್ನು ಅಳಿಸಬೇಕೇ ಹೊರತು, ನ್ಯಾಯ ಸಾಧನೆಗೆ ಬಳಸುವ ಜಾತಿ ಗುರುತನ್ನು ಹಂತ ಹಂತವಾಗಿ ಕಡಿಮೆ ಮಾಡುತ್ತಾ ಅಂತಿಮವಾಗಿ ಅಳಿಸಲೇಬೇಕು.

ಇಂದು ಭಾರತ ಜಗತ್ತಿಗೆ ಹೇಳಿಕೊಳ್ಳುವ ರಾಷ್ಟ್ರ, ಅಂತರಿಕ್ಷದಲ್ಲಿ ಸಾಧನೆ, ಆರ್ಥಿಕ ಪ್ರಗತಿ, ವಿಜ್ಞಾನದಲ್ಲಿ ಕ್ರಾಂತಿ. ಆದರೆ ಒಳಗೆ ನೋಡಿದರೆ ಇನ್ನೂ ಜಾತಿಯ ಹೆಸರಿನಲ್ಲಿ ಹಿಂಸೆ, ವಿಭಜನೆ, ರಾಜಕೀಯ ಕುತಂತ್ರ ಇದ್ದೇ ಇದೆ. ಈ ಬಲವಾದ ಬಿರುಕು ಸರಿಪಡಿಸದೆ, ನಾವು ನಿಜವಾದ ಪ್ರಜಾಪ್ರಭುತ್ವದ ಕನಸು ಕಾಣಲಾರೆವು.



– ಸಿಕಂದರ ಎಂ.ಆರಿ.
ಪತ್ರಕರ್ತ, ಕಾನೂನು ವಿದ್ಯಾರ್ಥಿ.

# ಸಾಹಿತಿ ಎಸ್.ಎಲ್. ಭೈರಪ್ಪ ನಿಧನಕ್ಕೆ ಕಂಬನಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡದ ಖ್ಯಾತ ಕಾದಂಬರಿಕಾರ ಎಸ್.ಎಲ್. ಭೈರಪ್ಪನವರು ಬುಧವಾರ ನಿಧನರಾಗಿದ್ದು, ಅವರ ನಿಧನಕ್ಕೆ ತಾಲೂಕಿನ ಸಾಹಿತಿಗಳು, ಅಭಿಮಾನಿಗಳು ಕಂಬನಿ ಮಿಡಿದಿದ್ದಾರೆ.

ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ, ಶಾಸಕ ಡಾ. ಚಂದ್ರು ಲಮಾಣಿ, ಸಾಹಿತಿಗಳಾದ ಪೂರ್ಣಾಜಿ ಖರಾಟೆ, ಸಿ.ಜಿ. ಹಿರೇಮಠ, ಬಿ.ಎಸ್. ಬಾಳೇಶ್ವರಮಠ, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಘಟಕದ ಅಧ್ಯಕ್ಷ ಈಶ್ವರ ಮೆಡ್ಲೇರಿ, ಆರ್. ಎನ್. ನವಲೆ, ಕಸಾಪ ಶಿಗ್ಲಿ ಗ್ರಾಮ ಘಟಕದ ಗೌರವಾಧ್ಯಕ್ಷ ಪ್ರವೀಣ ಹುಲಗೂರ, ತಾಲೂಕು ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಗರಾಜ ಹಣಗಿ, ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಲ್.ಎಸ್. ಅರಳಹಳ್ಳಿ, ಕೆ.ಎಸ್. ಕೊಡ್ಲಿವಾಡ, ಬಿ.ಎಸ್. ಹೆಬ್ಬಾಳ, ಜಿ.ಎಸ್. ರಾಮಶೆಟ್ಟರ್, ಎಸ್.ಎಫ್. ಆದಿ, ಹಿರಿಯ ಮಹಿಳಾ ಸಾಹಿತಿಗಳಾದ ಜಯಲಕ್ಷ್ಮೀ ಗಡ್ಡದೇವರಮಠ, ಲಲಿತಕ್ಕ ಕೆರಿಮನಿ, ಮೈತ್ರಾದೇವಿ ಹಿರೇಮಠ, ನಿರ್ಮಲಾ ಶೆಟ್ಟರ್, ಡಾ. ಜಯಶ್ರೀ ಕೋಲಕಾರ ಹಾಗೂ ತಾಲೂಕಾ ಕಾರ್ಯನಿರತ ಪತ್ರಕರ್ತರ ಸಂಘ, ಕಸಾಪ, ಕರವೇ ಪದಾಧಿಕಾರಿಗಳು ಸಂತಾಪ ಸೂಚಿಸಿದ್ದಾರೆ.

**ಗದಗ ಎಸ್‌ಎಸ್‌ಕೆ ಸಮಾಜದಿಂದ ನಮ್ಮೂರ ದಸರಾ-2025**

# ಸಮಾಜ ಬಾಂಧವರ ಶಿಸ್ತು ಮಾದರಿಯಾಗಿದೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಾಡ ಹಬ್ಬ ದಸರಾವನ್ನು ಮೈಸೂರು, ಮಂಗಳೂರು ನಂತರ ಗದುಗಿನಲ್ಲಿ ಎಸ್‌ಎಸ್‌ಕೆ ಸಮಾಜದಿಂದ ಅದ್ದೂರಿಯಾಗಿ ಆಚರಿಸಲಾಗುತ್ತಿದೆ ಎಂದು ದತ್ತಾ ಡೆವಲಪರ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಕಿರಣ ಭೂಮಾ ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರ್ಬಾರ ವೇದಿಕೆಯಲ್ಲಿ ಜರುಗಿದ ನಮ್ಮೂರ ದಸರಾ-2025ರ 2ನೇ ದಿನದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಎಸ್‌ಎಸ್‌ಕೆ ಸಮಾಜ ಬಾಂಧವರ ಶಿಸ್ತು, ಸಂಯಮ, ಬದ್ಧತೆ, ಒಗ್ಗಟ್ಟು ನೋಡಿದರೆ ಹೆಮ್ಮೆ ಎನಿಸುತ್ತದೆ. ಆಧುನಿಕ ಯುಗದಲ್ಲಿ ಮೊಬೈಲ್ ಹಾಗೂ ಪಾಶ್ಚಿಮಾತ್ಯ ಸಂಸ್ಕೃತಿಗೆ ನಮ್ಮ ಜನರು ಮಾರುಹೋಗುತ್ತಿರುವ ಇಂದಿನ ದಿನಗಳಲ್ಲಿ ಎಸ್.ಎಸ್.ಕೆ ಸಮಾಜದವರು ಹಿಂದುತ್ವ ರಕ್ಷಣೆ ಹಾಗೂ ಸಂಸ್ಕೃತಿಯನ್ನು ಉಳಿಸಿಕೊಂಡು ಹೋಗುವಲ್ಲಿ ಪ್ರಮುಖರಾಗಿದ್ದಾರೆ ಎಂದು ಹೇಳಿದರು.

ದತ್ತಾ ಡೆವಲಪರ್ಸ್ ನಿರ್ದೇಶಕ ಎಸ್.ಎಚ್. ಶಿವನಗೌಡ್ರ ಸಾಂದರ್ಭಿಕವಾಗಿ ಮಾತನಾಡಿದರು. ಎಸ್‌ಎಸ್‌ಕೆ ಸಮಾಜದ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ಅಧ್ಯಕ್ಷತೆ ವಹಿಸಿದ್ದರು. ವೇದಿಕೆ ಮೇಲೆ ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ, ರವಿ ಶಿದ್ಲಿಂಗ, ದಸರಾ ಕಮಿಟಿ ಚೇರಮನ್ ಅನಿಲ್ ಖಟವಟೆ ಉಪಸ್ಥಿತರಿದ್ದರು.

ಪಂಚ ಕಮಿಟಿ ಸದಸ್ಯರಾದ ಎನ್.ಆರ್. ಖಟವಟೆ, ವಿಶ್ವನಾಥಸಾ ಖಟವಟೆ, ಸುರೇಶಕುಮಾರ ಬದಿ, ಬಲರಾಮ ಬಸವಾ, ಪರಶುರಾಮ ಬದಿ, ವಿಷ್ಣುಸಾ ಶಿದ್ಲಿಂಗ, ಮಾರುತಿ ಪವಾರ, ಪ್ರಕಾಶ ಬಾಕಳೆ, ಅಂಬಾಸಾ ಖಟವಟೆ, ಮೋತಿಲಾಲಸಾ ಪೂಜಾರಿ, ವಿನೋದ ಬಾಂಡಗೆ, ತರುಣ ಸಂಘದ ವಿಶ್ವನಾಥಸಾ ಸೂಳಂಕಿ, ರಾಘು ಬಾರಡ, ಶ್ರೀಕಾಂತ ಬಾಕಳೆ, ಮಾಧು ಬದಿ, ನಾಗರಾಜ ಖೋಡೆ, ಶ್ರೀನಿವಾಸ ಬಾಂಡಗೆ, ಸುಧೀರ ಕಾಟಿಗರ, ಮಹಿಳಾ ಮಂಡಳದ ಅಧ್ಯಕ್ಷೆ ಉಮಾಬಾಯಿ ಬೇವಿನಕಟ್ಟಿ, ಸ್ನೇಹಲತಾ ಕಬಾಡಿ, ಗೀತಾಬಾಯಿ ಹಬೀಬ ಮುಂತಾದವರು ಉಪಸ್ಥಿತರಿದ್ದರು.

ಶ್ರೀನಿವಾಸ ಬಾಂಡಗೆ ಸ್ವಾಗತಿಸಿದರು. ಜಿ.ಎನ್. ಹಬೀಬ ನಿರೂಪಿಸಿದರು. ಗಂಗಾಧರ ಹಬೀಬ ವಂದಿಸಿದರು.

ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಶರಣಬಸಪ್ಪ (ರಾಜು) ಗುಡಿಮನಿ ಮಾತನಾಡಿ, ಎಸ್‌ಎಸ್‌ಕೆ ಸಮಾಜದವರು ಶ್ರಮಜೀವಿಗಳು. ಜೀವನದಲ್ಲಿ ಕೇವಲ ಹಣ ಗಳಿಸುವುದು ಮುಖ್ಯವಲ್ಲ. ದಾನ-ಧರ್ಮಗಳನ್ನು ಮಾಡುವ ಮೂಲಕ ಹಿರಿಯ ಜೀವಿಗಳು ಹಾಗೂ ಕುಟುಂಬದವರೊಂದಿಗೆ ಪ್ರೀತಿ-ವಾತ್ಸಲ್ಯದಿಂದ ಬಾಳಬೇಕು ಎಂದು ಹೇಳಿದರು.

# ಗದುಗಿನಲ್ಲಿ ಡಿ.ಸಿ.ಸಿ ಬ್ಯಾಂಕ್ ಸ್ಥಾಪನೆಯಾಗಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಸಂಘವನ್ನು ಇಡೀ ಜಗತ್ತಿಗೆ ಪರಿಚಯಿಸಿದ ಕೀರ್ತಿ ಗದಗ ಜಿಲ್ಲೆಗೆ ಸಲ್ಲುತ್ತದೆ. ಅದರಲ್ಲೂ ಏಷ್ಯಾ ಖಂಡದಲ್ಲಿಯೇ ಪ್ರಪ್ರಥಮ ಬಾರಿಗೆ ಗದಗ ಜಿಲ್ಲೆಯ ಕಣಗಿನಹಾಳ ಗ್ರಾಮದಲ್ಲಿ ಸ್ಥಾಪನೆ ಮಾಡಿ ಇತಿಹಾಸ ನಿರ್ಮಿಸಲಾಗಿದೆ. ಇಂತಹ ಐತಿಹಾಸಿಕ ಜಿಲ್ಲೆಯಲ್ಲಿ ಡಿ.ಸಿ.ಸಿ ಬ್ಯಾಂಕ್ ಸ್ಥಾಪನೆಯಾಗಬೇಕು ಎನ್ನುವುದು ರೈತರ ಆಸೆಯಾಗಿದೆ ಎಂದು ಕರವೇ ಜಿಲ್ಲಾಧ್ಯಕ್ಷ ಹನುಮಂತಪ್ಪ ಅಬ್ಬಿಗೇರಿ ಸಿಎಂ ಸಿದ್ದರಾಮಯ್ಯನವರಿಗೆ ಮನವಿ ಸಲ್ಲಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇತ್ತೀಚೆಗೆ ಗದುಗಿಗೆ ಆಗಮಿಸಿದ್ದ ಸಂದರ್ಭದಲ್ಲಿ ಅವರು ಮನವಿ ಸಲ್ಲಿಸಿ, ಸುಮಾರು 27 ವರ್ಷಗಳಿಂದ ಡಿ.ಸಿ.ಸಿ ಬ್ಯಾಂಕ್‌ನಿಂದ ಗದಗ ಜಿಲ್ಲೆ ವಂಚಿತವಾಗಿದೆ. ಅದಕ್ಕಾಗಿ ಮುಖ್ಯಮಂತ್ರಿಗಳು ಗದಗ ಜಿಲ್ಲೆಗೆ ನೂತನವಾಗಿ ಡಿ.ಸಿ.ಸಿ ಬ್ಯಾಂಕನ್ನು ಮಂಜೂರು ಮಾಡಬೇಕು ಎಂದು ವಿನಂತಿಸಿದರು. ಈ ಸಂದರ್ಭದಲ್ಲಿ ನಿಂಗನಗೌಡ ಮಾಲಿಪಾಟೀಲ, ಮುತ್ತಣ್ಣ ಚೌಡಣ್ಣನವರ, ತೌಸಿಫ್ ಡಾಲಾಯತ್, ವಿನಾಯಕ ಬದಿ, ಸಿರಾಜ್ ಹೊಸಮನಿ, ದಾವಲ್ ತಹಸೀಲ್ದಾರ್, ರಾಹುಲ್ ತೇರದಾಳ, ಮಂಜುನಾಥ ಮಾಳಾವಿ, ಕುಮಾರ ರೇವಣ್ಣವರ, ನಬೀಸಾಬ್ ಕಿಲ್ಲೇದಾರ್, ಶಿವಕುಮಾರ ಮಠದ, ವಿಜಯ ಬಡಿಗೇರ, ಮೆಹಬೂಬಲಿ ಡಾಲಾಯತ್ ಸೇರಿದಂತೆ ಕರವೇ ಸದಸ್ಯರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

# ವಿವಿಧ ಕಾಮಗಾರಿಗಳಿಗೆ ಭೂಮಿಪೂಜೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ಕಾರವಾರ ಇಳಕಲ್ಲ ರಾ.ಹೆ 06 ಕಿಮೀ 245.2ರ ಚೆನ್ನಮ್ಮ ವೃತ್ತ ಮತ್ತು ಬನ್ನಿಕಟ್ಟಿಯ ಹತ್ತಿರ ಹಾಗೂ ಕಿ.ಮೀ 245.40 ರಲ್ಲಿ ಲದ್ವಾ ವೃತ್ತದಿಂದ ಬನ್ನಿಕಟ್ಟೆಯ ರಸ್ತೆ ಭೀಷ್ಮ ಕೆರೆಯ ಹತ್ತಿರ ರಸ್ತೆ ಸುರಕ್ಷತಾ ಕಾಮಗಾರಿಗಳಿಗೆ ಬುಧವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ನಗರಸಭೆ ಆಯುಕ್ತ ರಾಜಾರಾಮ ಪವಾರ ಸೇರಿದಂತೆ ಹಿರಿಯರು, ಗಣ್ಯರು ಹಾಜರಿದ್ದರು.

**ರಾಜ್ಯ ದೂರಸಂವೇದಿ ಅನ್ವಯಿಕ ಕೇಂದ್ರಕ್ಕೆ ಇಟಾಲಿಯನ್ ಏರೋಸ್ಪೇಸ್, ಬಾಹ್ಯಾಕಾಶ ನಿಯೋಗ ಭೇಟಿ**

# ಬಾಹ್ಯಾಕಾಶ ನಾವೀನ್ಯತೆಯಲ್ಲಿ ಕರ್ನಾಟಕಕ್ಕೆ ಬಲ




■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರಕ್ಕೆ ಇಟಲಿ-ಭಾರತ ಬಾಹ್ಯಾಕಾಶ, ಏರೋಸ್ಪೇಸ್ ಮತ್ತು ರಕ್ಷಣಾ ರೋಡ್ ಶೋ ಭಾಗವಾಗಿ ಇಟಾಲಿಯನ್ ಏರೋಸ್ಪೇಸ್ ಮತ್ತು ಬಾಹ್ಯಾಕಾಶ ನಿಯೋಗವು ಸೆಪ್ಟೆಂಬರ್ 24ರಂದು ಭೇಟಿ ನೀಡಿತು.

ಭೇಟಿಯ ಸಮಯದಲ್ಲಿ ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರಾದ ಡಾ. ರಾಜೇಶ್ ಎನ್.ಎಲ್ ಅವರು ಕೇಂದ್ರದ ಧ್ಯೇಯ, ಮುಂದುವರೆದ ಸಾಮರ್ಥ್ಯಗಳು, ಬೆಳೆ ಮೇಲ್ವಿಚಾರಣೆ ಹಾಗೂ ವಿಪತ್ತು ನಿರ್ವಹಣೆಯಿಂದ ನಗರ ಯೋಜನೆ ಮತ್ತು ನೈಸರ್ಗಿಕ ಸಂಪನ್ಮೂಲ ನಿರ್ವಹಣೆಯವರೆಗೆ ಬಾಹ್ಯಾಕಾಶ ಆಧಾರಿತ ಆಡಳಿತ ಮತ್ತು ಸುಸ್ಥಿರ ಅಭಿವೃದ್ಧಿಯಲ್ಲಿ ವೈವಿಧ್ಯಮಯ ಅನ್ವಯಿಕೆಗಳನ್ನು ಪ್ರಸ್ತುತಪಡಿಸಿದರು.

ಕಿಟ್ಸ್ ಸಂಸ್ಥೆಯ ಪ್ರಧಾನ ವ್ಯವಸ್ಥಾಪಕ ಪ್ರಮೋದ್ ಎಲ್.ಪಾಟೀಲ್ ಅವರು, ಕರಡು ಕರ್ನಾಟಕ ಬಾಹ್ಯಾಕಾಶ ನೀತಿಯ ಪ್ರಮುಖ ಅಂಶಗಳನ್ನು ಹಂಚಿಕೊಂಡು ಜಾಗತಿಕ ಸಾಮರ್ಥ್ಯ ಕೇಂದ್ರಗಳಲ್ಲಿ ಕರ್ನಾಟಕವು ಮುಂಚೂಣಿಯಲ್ಲಿರುವುದನ್ನು ತಿಳಿಸಿದರು.

ಕರ್ನಾಟಕ ಸರ್ಕಾರದ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಗ್ಲೋಬಲ್ ಇನ್ನೋವೇಶನ್ ಅಲೈಯನ್ಸ್ (ಜಿಐಎ) ಅಡಿಯಲ್ಲಿ ಸುಗಮಗೊಳಿಸಲಾದ ಈ ಕಾರ್ಯಕ್ರಮವು ಬಾಹ್ಯಾಕಾಶ ಅನ್ವಯಿಕೆಗಳು, ಏರೋಸ್ಪೇಸ್ ತಂತ್ರಜ್ಞಾನಗಳು ಮತ್ತು ರಕ್ಷಣಾ ನಾವೀನ್ಯತೆಗಳಲ್ಲಿ ಸಹಯೋಗವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ.

ಈ ಭೇಟಿಯು ಭಾರತ-ಇಟಲಿಯ ಪಾಲುದಾರಿಕೆಯನ್ನು ಮುನ್ನಡೆಸುವಲ್ಲಿ ಒಂದು ಪ್ರಮುಖ ಮೈಲಿಗಲ್ಲನ್ನು ಗುರುತಿಸುವುದಲ್ಲದೇ ಬಾಹ್ಯಾಕಾಶ ಮತ್ತು ಬಾಹ್ಯಾಕಾಶ ನಾವೀನ್ಯತೆಯಲ್ಲಿ ಜಾಗತಿಕ ಕೇಂದ್ರವಾಗಿ ಕರ್ನಾಟಕದ ಪಾತ್ರವನ್ನು ಬಲಪಡಿಸಲಿದೆ.

ನಿಯೋಗದಲ್ಲಿ ಇಟಾಲಿಯನ್ ಬಾಹ್ಯಾಕಾಶ ಸಂಸ್ಥೆಯ ಉಪನಿರ್ದೇಶಕರಾದ ಮಾರಿಯಾ ಚಿಯಾರಾ ನೊಟೊ, ನವದೆಹಲಿಯ ಇಟಲಿಯ ವ್ಯಾಪಾರ ಆಯುಕ್ತರಾದ ಆಂಟೋನಿಯೆಟ್ಟಾ ಬಕ್ಕನಾರಿ, ಬೆಂಗಳೂರಿನ ಇಟಲಿಯ ಕಾನ್ಸುಲ್ ಜನರಲ್ ಜಿಯಾಂಡೊಮೆನಿಕೊ ಮಿಲಾನೊ ಹಾಗೂ ಇಟಲಿಯ ಬಾಹ್ಯಾಕಾಶ ಮತ್ತು ಬಾಹ್ಯಾಕಾಶ ಕ್ಷೇತ್ರದ ಪ್ರತಿಷ್ಠಿತ ಕಂಪನಿಗಳು ಭಾಗವಹಿಸಿದ್ದವು ಎಂದು ಕನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರದ ನಿರ್ದೇಶಕರಾದ ಡಾ. ರಾಜೇಶ್ ಎನ್.ಎಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಂಟಿ ಸಂಶೋಧನೆ, ಶೈಕ್ಷಣಿಕ ಸಂಪರ್ಕಗಳು ಮತ್ತು ಪ್ರತಿಭಾ ವಿನಿಮಯದಲ್ಲಿ ಭಾರತ-ಇಟಲಿ ಸಹಕಾರವನ್ನು ವೃದ್ಧಿಸುವುದು, ಮಾರುಕಟ್ಟೆ ಪ್ರವೇಶ, ಸಹ ಅಭಿವೃದ್ಧಿ, ಕೈಗಾರಿಕೆ ಸಂಶೋಧನೆ ಮತ್ತು ಅಭಿವೃದ್ಧಿಗಾಗಿ ಅವಕಾಶಗಳನ್ನು ತೆರೆಯುವುದು ಹಾಗೂ ಬಾಹ್ಯಾಕಾಶ, ನಾವೀನ್ಯತೆ ಮತ್ತು ತಂತ್ರಜ್ಞಾನ ನೇತೃತ್ವದ ಬೆಳವಣಿಗೆಯಲ್ಲಿ ಕರ್ನಾಟಕವನ್ನು ಇಟಲಿಗೆ ಕಾರ್ಯತಂತ್ರದ ಪಾಲುದಾರರನ್ನಾಗಿ ಸ್ಥಾನೀಕರಿಸುವುದಕ್ಕೆ ಸಂಬಂಧಿಸಿದ ಪ್ರಮುಖ ಅಂಶಗಳ ಬಗ್ಗೆ ಪ್ರಸ್ತಾಪಿಸಲಾಯಿತು.

# ನಾಳೆ ರವಿ ಚನ್ನಣ್ಣವರ ನರೇಗಲ್ಲಿಗೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಕರ್ನಾಟಕ ರಾಜ್ಯ ಅಗ್ನಿಶಾಮಕ ದಳದ ಡಿಐಜಿಪಿ ರವಿ ಡಿ.ಚನ್ನಣ್ಣವರ ಅವರು ಸೆ. 27ಕ್ಕೆ ನರೇಗಲ್ಲಿಗೆ ಆಗಮಿಸಲಿದ್ದಾರೆ ಎಂದು ಬೀಚಿ ಬಳಗದ ಸಂಚಾಲಕ ಈಶ್ವರ ಬೆಟಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಪಟ್ಟಣದ ಬೀಚಿ ಬಳಗ ಹಾಗೂ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯವರು ಸಂಯುಕ್ತವಾಗಿ ಏರ್ಪಡಿಸಿರುವ ವಿದ್ಯಾರ್ಥಿ ಪ್ರೇರಣಾ ಶಿಬಿರದಲ್ಲಿ ಪಾಲ್ಗೊಂಡು ವಿದ್ಯಾರ್ಥಿಗಳಿಗೆ ಸ್ಫೂರ್ತಿದಾಯಕ ಮಾತುಗಳನ್ನಾಡಲಿದ್ದಾರೆ. ನರೇಗಲ್ಲದ ಶ್ರೀ ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ಸಭಾಂಗಣದಲ್ಲಿ ಸೆ. 27ರ ಬೆಳಿಗ್ಗೆ 10.30ಕ್ಕೆ ನಿಗದಿಯಾಗಿರುವ ಈ ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಶ್ರೀ ಅನ್ನದಾನ ವಿಜಯ ವಿದ್ಯಾಪ್ರಸಾರಕ ಸಮಿತಿಯ ಅಧ್ಯಕ್ಷರು, ಹಾಲಕೆರೆ ಸಂಸ್ಥಾನಮಠದ ಪೀಠಾಧಿಪತಿಗಳಾಗಿರುವ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ವಹಿಸಲಿದ್ದಾರೆ.

ಶಿಬಿರವನ್ನು ಮುಖಂಡ, ರೋಣ ಪುರಸಭೆಯ ಮಾಜಿ ಉಪಾಧ್ಯಕ್ಷ ಮಿಥುನ್ ಜಿ.ಪಾಟೀಲ ಉದ್ಘಾಟಿಸಲಿದ್ದಾರೆ. ಎಸ್‌ಎ ಪಿಯು ಕಾಲೇಜ್, ಅಭಿನವ ಪಿಯು ಕಾಲೇಜ್ ಮತ್ತು ಎಸ್‌ಎ ಪದವಿ ಕಾಲೇಜಿನ ಸುಮಾರು 2 ಸಾವಿರ ವಿದ್ಯಾರ್ಥಿಗಳು ಈ ಶಿಬಿರದ ಪ್ರಯೋಜನವನ್ನು ಪಡೆಯಲಿದ್ದಾರೆ. ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಅಧ್ಯಕ್ಷತೆ ವಹಿಸಲಿದ್ದು, ಎಸ್‌ಎವಿವಿಪಿ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್.ಆರ್. ಗೌಡರ, ಕಾಲೇಜು ಆಡಳಿತ ಮಂಡಳಿಗಳ ಅಧ್ಯಕ್ಷರಾದ ಡಾ. ಎಸ್.ಎ. ಪಾಟೀಲ, ಎಂ.ಜಿ. ಸೋಮನಕಟ್ಟಿ ಮತ್ತು ಶಿವಯ್ಯ ಚಕ್ಕಡಿಮಠ ಉಪಸ್ಥಿತರಿರಲಿದ್ದು, ಪ್ರಾಚಾರ್ಯರು, ಮುಖ್ಯ ಶಿಕ್ಷಕರು ಮತ್ತು ಸಿಬ್ಬಂದಿಯವರು ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಲಿಂಗಾಯತ ಸಮಾಜವನ್ನು ಉಳಿಸಿಕೊಳ್ಳಲು ಪ್ರತಿಷ್ಠೆಯನ್ನು ಬದಿಗೊತ್ತಿ: ಡಾ. ತೋಂಟದ ಸಿದ್ಧರಾಮ ಶ್ರೀ ಕರೆ

# ಲಿಂಗಾಯತರು 'ಲಿಂಗಾಯತ ಧರ್ಮ' ಎಂದು ಬರೆಸಿರಿ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಸರಕಾರ ಜಾತಿಗಣತಿ ಪ್ರಾರಂಭಿಸಿದ್ದು, ಜನರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸ್ಥಿತಿಗತಿಗಳನ್ನು ಸಮೀಕ್ಷೆ ಮಾಡುವುದು ಇದರ ಉದ್ದೇಶವಾಗಿದೆ. ತರಾತುರಿಯಲ್ಲಿ ನಡೆಯುತ್ತಿರುವ ಈ ಸಮೀಕ್ಷೆಯಿಂದಾಗಿ ಜನರಲ್ಲಿ, ವಿಶೇಷವಾಗಿ ಲಿಂಗಾಯತರಲ್ಲಿ ಸಾಕಷ್ಟು ಗೊಂದಲವುಂಟಾಗಿದೆ. ಸಣ್ಣ ಸಣ್ಣ ಸಮುದಾಯಗಳು ಲಿಂಗಾಯತ ಧರ್ಮದಿಂದ ದೂರ ಸರಿಯುತ್ತಿರುವ ಈ ಸಂದರ್ಭದಲ್ಲಿ ಅಖಂಡ ಲಿಂಗಾಯತ ಸಮಾಜವನ್ನು ಗಟ್ಟಿಯಾಗಿ ಉಳಿಸಿಕೊಳ್ಳಲು ಪ್ರತಿಷ್ಠೆಯನ್ನು ಬದಿಗಿರಿಸಿ ಪ್ರಾಮಾಣಿಕವಾಗಿ ಪ್ರಯತ್ನಿಸಬೇಕಾಗಿದೆ ಎಂದು ಗದಗ-ಡಂಬಳ ಜಗದ್ಗುರು ತೋಂಟದಾರ್ಯಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ತಿಳಿಸಿದ್ದಾರೆ.

ಸಂವಿಧಾನದ ಕಲಂ 25ರ ಪ್ರಕಾರ ದೇಶದಲ್ಲಿ ಪ್ರಚಲಿತದಲ್ಲಿರುವ ಎಲ್ಲ ಧರ್ಮಗಳನ್ನು ಮಾನ್ಯ ಮಾಡಬೇಕಾಗಿರುವುದು ಸರಕಾರದ ಆದ್ಯ ಕರ್ತವ್ಯವಾಗಿದೆ. ಈ ಕಾರಣಕ್ಕಾಗಿಯೇ ಜನಗಣತಿ ಫಾರ್ಮ್‌ನ 8ನೇ ಕಾಲಂನ 11ನೇ ಉಪಕಾಲಂನಲ್ಲಿ 'ಇತರೆ' ಎಂದು ಪ್ರತ್ಯೇಕ ಕಾಲಂ ಮೀಸಲಾಗಿರಿಸಿದೆ. ಇಲ್ಲಿ 'ಲಿಂಗಾಯತ ಧರ್ಮ' ಎಂದು ಬರೆಯಲು



ಗಣತಿದಾರರಿಗೆ ಸೂಚಿಸಬೇಕು. ಇತ್ತೀಚೆಗೆ ಅನೇಕ ಮಠಾಧಿಪತಿಗಳು ಮತ್ತು ಜಾಗತಿಕ ಲಿಂಗಾಯತ ಮಹಾಸಭೆಯವರು ಧರ್ಮದ ಕಾಲಂದಲ್ಲಿ 'ಹಿಂದೂ' ಎಂದು ಬರೆಸಬಾರದು ಎಂದೂ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯು ಈ ವಿಷಯವನ್ನು ಲಿಂಗಾಯತರ ವಿವೇಚನೆಗೆ ಬಿಟ್ಟಿರುವುದನ್ನು ಎಲ್ಲರೂ ಗಮನಿಸಿ 8ನೇ ಧರ್ಮದ ಕಾಲಂನಲ್ಲಿ 'ಲಿಂಗಾಯತ ಧರ್ಮ' ಎಂದೇ ಬರೆಸಬೇಕು.

9ನೇ ಜಾತಿ ಕಾಲಂದಲ್ಲಿ ವೀರಶೈವರು 'ವೀರಶೈವ' ಎಂದು, ವೀರಶೈವ ಲಿಂಗಾಯತರು ವೀರಶೈವ ಲಿಂಗಾಯತರೆಂದು, ಲಿಂಗಾಯತದ ಬೇರೆ ಬೇರೆ ಪಂಗಡದವರು ತಮ್ಮ ತಮ್ಮ ಜಾತಿಗಳ ಹೆಸರನ್ನು ಲಿಂಗಾಯತ ಪಂಚಮಸಾಲಿ, ಲಿಂಗಾಯತ ಕುಡುವಕ್ಕಲಿಗ, ಲಿಂಗಾಯತ ಬಣಜಿಗ, ಲಿಂಗಾಯತ ರೆಡ್ಡಿ ಇತ್ಯಾದಿ ಬರೆಸಬೇಕು. ಜಾತಿಗಳಲ್ಲಿ ಉಪಜಾತಿಗಳಿದ್ದರೆ ಉಪಜಾತಿ ಕಾಲಂನಲ್ಲಿ ಅವುಗಳನ್ನು ನಮೂದಿಸಬಹುದು. ಇದರಿಂದ ಲಿಂಗಾಯತರ ಜನಸಂಖ್ಯೆಯನ್ನು ನಿಖರವಾಗಿ ತಿಳಿದುಕೊಳ್ಳಲು ಸಾಧ್ಯವಾಗುವುದು.

'ಲಿಂಗಾಯತ' ಒಂದು ವಿಶಿಷ್ಟ ಧರ್ಮ. ವಿವಿಧ ಕಾಯಕಗಳನ್ನು ಮಾಡುವ ಪಂಗಡಗಳನ್ನು ಇಂದು ಜಾತಿಗಳೆಂದು ಗುರುತಿಸಲಾಗುತ್ತಿದ್ದರೂ ಎಲ್ಲರಿಗೂ ದೊರೆಯುವ ಸಂಸ್ಕಾರ ಹಾಗೂ ಧಾರ್ಮಿಕ ಆಚರಣೆಗಳಲ್ಲಿ ಏನೂ ವ್ಯತ್ಯಾಸವಿಲ್ಲ. ಸ್ತ್ರೀ-ಪುರುಷರಿಬ್ಬರಿಗೂ ಸಮಾನ ಧಾರ್ಮಿಕ ಸ್ವಾತಂತ್ರ್ಯವಿದೆ. ಕಾಯಕ-ದಾಸೋಹ ತತ್ತ್ವಗಳ ಅಡಿಯಲ್ಲಿ ಈ ಧರ್ಮ ಬಸವಾದಿ ಶರಣರಿಂದ ರೂಪುಗೊಂಡಿದೆ. ಸಮಾನತೆ ಈ ಧರ್ಮದ ಮೂಲ ಆಶಯ. ಸಕಲ ಜೀವಿಗಳಿಗೆ ಲೇಸ ಬಯಸುವುದೇ ಇದರ ಉದ್ದೇಶ. ಈ ಧರ್ಮಾನುಯಾಯಿಗಳು ಜಗತ್ತಿನಲ್ಲಿಯೇ ಒಂದು ವಿಶಿಷ್ಟ ಜನಾಂಗ. ಇವರ ಸಂಸ್ಕೃತಿಯೂ ವೈಶಿಷ್ಟ್ಯಪೂರ್ಣ. ಈ ಜನಾಂಗದ ಅಸ್ಮಿತೆ ಕಣ್ಮರೆಯಾಗಬಾರದು. ಈ ಜನಾಂಗ ಹಾಗೂ ಸಂಸ್ಕೃತಿಯನ್ನು ಉಳಿಸಿಕೊಂಡು, ಬೆಳೆಸಿಕೊಂಡು ಹೋಗುವುದು ಪ್ರತಿಯೊಬ್ಬ ಲಿಂಗಾಯತನ ಕರ್ತವ್ಯವಾಗಿದೆ ಎಂದು ಶ್ರೀಗಳು ಅಭಿಪ್ರಾಯಪಟ್ಟಿದ್ದಾರೆ.

**ಸಮಾರೋಪ ಸಮಾರಂಭ**

ಸೆ. 1ರಿಂದ ಬಸವಜನ್ಮಭೂಮಿ ಬಸವನಬಾಗೇವಾಡಿಯಿಂದ ಪ್ರಾರಂಭಗೊಂಡ 'ಬಸವ ಸಂಸ್ಕೃತಿ ಅಭಿಯಾನವು' ಬರುವ ಅಕ್ಟೋಬರ್ 5ರಂದು ರಾಜಧಾನಿ ಬೆಂಗಳೂರಿನ ಅರಮನೆ ಮೈದಾನದಲ್ಲಿ (ಗಾಯತ್ರಿವಿಹಾರ ಗೇಟ್ ನಂ. 4) ಬೆಳಿಗ್ಗೆ 11 ಗಂಟೆಗೆ ಸಮಾರೋಪಗೊಳ್ಳಲಿದೆ. ಕರ್ನಾಟಕದ ಎಲ್ಲ ಜಿಲ್ಲಾ ಕೇಂದ್ರಗಳನ್ನು ಸುತ್ತಿ ಬಸವಾದಿ ಶರಣರ ತತ್ತ್ವಾದರ್ಶಗಳನ್ನು ಜನಮನಕ್ಕೆ ತಲುಪಿಸುವಲ್ಲಿ ಅಭಿಯಾನವು ಯಶಸ್ವಿಯಾಗಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ವಿಶೇಷವಾಗಿ ಭಾಗವಹಿಸುವ ಈ ಅಭಿಯಾನದ ಸಮಾರೋಪ ಸಮಾರಂಭದಲ್ಲಿ ಎಲ್ಲ ಬಸವಾನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಮಾರೋಪ ಸಮಾರಂಭವನ್ನು ಯಶಸ್ವಿಗೊಳಿಸಬೇಕೆಂದು ಶ್ರೀಗಳು ತಿಳಿಸಿದ್ದಾರೆ.


# ಭಗವಂತನ ದರ್ಶನಕ್ಕೆ ಆರಾಧನೆ ಮುಖ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಾಣಿಗಳಲ್ಲಿ ಧರ್ಮ ಮಾತ್ರ ಬೇರೆಯಿದೆ. ಉಳಿದಂತೆ ಪ್ರಾಣಿ ಮತ್ತು ಮನುಷ್ಯರಲ್ಲಿ ಆಹಾರ, ಸಂತಾನ ಮತ್ತು ಬದುಕಿನಲ್ಲಿ ವ್ಯತ್ಯಾಸವಿಲ್ಲ ಎಂದು ಮಾದಿನಳ್ಳಿಯ ಶ್ರೀರಾಮಕೃಷ್ಣ ಮಠದ ಸ್ವಾಮಿ ಧರ್ಮವ್ರತಾನಂದ ಅವರು ಹೇಳಿದರು.

ಅವರು ನಗರದ ಎಪಿಎಂಸಿ ಆವರಣದಲ್ಲಿರುವ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಶರನ್ನವರಾತ್ರಿ ಉತ್ಸವ-2025ರ 2ನೇ ದಿನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಗು ಅಮ್ಮನ ಸೆರಗು ಹಿಡಿದು ಬೇಡಿಕೊಳ್ಳುವಂತೆ ಜಗನ್ಮಾತೆಯನ್ನು ಪೂಜೆ ಮತ್ತು ಪ್ರಾರ್ಥನೆಗಳಿಂದ ಬೇಡಿ ದೇವರ ದರ್ಶನ ಮಾಡಿಕೊಳ್ಳಬೇಕು. ಮನುಷ್ಯನು ಭಾವಜೀವಿಯಾಗಿದ್ದು, ಹೂವಿಗೆ ಸುಗಂಧದ ಭಾವವಿದ್ದಂತೆ, ಊಟಕ್ಕೆ ರುಚಿಯ ಭಾವವಿದ್ದಂತೆ ಮನುಷ್ಯನಿಗೆ ಆರಾಧನೆಯ ಭಾವವಿಲ್ಲದಿದ್ದರೆ ಅದು



ಪೂಜೆ ಆಗುವದಿಲ್ಲ. ಆದ್ದರಿಂದ ಪ್ರತಿಯೊಬ್ಬರೂ ತಮ್ಮನ್ನೇ ತಾವು ಭಗವಂತನಲ್ಲಿ ಅರ್ಪಿಸಿಕೊಂಡು ಆರಾಧನೆ ಮಾಡುವದರಿಂದ ಜಗನ್ಮಾತೆಯು ಮೋಕ್ಷದ ಬಾಗಿಲನ್ನು ತೆರೆಯುತ್ತಾಳೆ ಎಂದರು ಹೇಳಿದರು.

ಆಸೆ ಎಲ್ಲರಲ್ಲಿಯೂ ಇರಬೇಕು. ಆದರೆ, ಅತಿ ಆಸೆ ಇರಬಾರದು. ಇದು ನಮ್ಮ ಸತ್ವ ಬುದ್ಧಿಯನ್ನು ಹಾಳು ಮಾಡುತ್ತದೆ. ಪ್ರಾಣಿಗಳು ಹೊಟ್ಟೆ ತುಂಬುವಷ್ಟು ಬೇಟೆ ಆಡುತ್ತವೆ. ಆದರೆ, ಮನುಷ್ಯರು ನಾಲ್ಕು ತಲೆಮಾರುಗಳಷ್ಟು ಗಳಿಸಿದರೂ ಮತ್ತಷ್ಟು ಬೇಕು ಎಂದು ಆಸೆ ಪಡುತ್ತಾರೆ. ಅತಿ ಆಸೆ ದುಃಖಕ್ಕೆ ಮೂಲವಾಗುತ್ತದೆ. ಅದ್ದರಿಂದ ಆಸೆಯನ್ನು ಬೆಳೆಯಲು ಬಿಡಬಾರದು ಎಂದು ಹೇಳಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಸ್ವಾಮಿ ಜಗನ್ನಾಥನಂದ ಅವರು ಮಾತನಾಡಿ, ಜಗನ್ಮಾತೆಯನ್ನು ಒಲಿಸಿಕೊಳ್ಳುವದು ಸುಲಭವಾಗಿದೆ. ಆದರೆ, ಮನುಷ್ಯರು ನೂರಾರು ಕಲುಷಿತ ಭಾವನೆಗಳಲ್ಲಿ ಮುಳುಗಿ ಹೋಗಿರುವದರಿಂದ ಜಗನ್ಮಾತೆಯಿಂದ ದೂರಾಗುತ್ತಿದ್ದಾರೆ. ಪ್ರತಿದಿನ ಲಲಿತಾ ಸಹಸ್ರನಾಮಾವಳಿ ಪಠಿಸುವುದರಿಂದ ಶ್ರೀದೇವಿಯನ್ನು ಒಲಿಸಿಕೊಳ್ಳಬಹುದು ಎಂದು ಹೇಳಿದರು.

ನಿವೃತ್ತ ಉಪನ್ಯಾಸಕರಾದ ಎಸ್. ಎಚ್. ದೇಶಪ್ಪನವರ ಕಾರ್ಯಕ್ರಮ ನಿರೂಪಿಸಿದರು. ನಂತರ ಪ್ರಸಾದ ಸೇವೆ ಜರುಗಿತು.

### ಎನ್‌ಎಸ್‌ಎಸ್ ಶಿಬಿರದ 'ಸ್ವಚ್ಛ ಭಾರತ ಅಭಿಯಾನ' ಕುರಿತು ಉಪನ್ಯಾಸ

# ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಲ್ಲಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಚ್ಛ ಭಾರತ ಅಭಿಯಾನ ಮೊಟ್ಟಮೊದಲು ನಮ್ಮಿಂದಲೇ ಆರಂಭವಾಗಬೇಕು. ನಾವು ಮತ್ತೊಬ್ಬರಿಗೆ ಹೇಳುವ ಬದಲು ಮಾದರಿಯಾಗಬೇಕೆಂದು ವ್ಹಿಡಿಎಸ್‌ಟಿಸಿ ಬಾಲಕರ ಪ.ಪೂ ಕಾಲೇಜಿನ ಪ್ರಾಚಾರ್ಯ ಎಂ.ಸಿ. ಕಟ್ಟಿಮನಿ ಹೇಳಿದರು.

ಅವರು ತಾಲೂಕಿನ ಅಡವಿಸೋಮಾಪೂರ ಗ್ರಾಮದ ಶ್ರೀ ಮಲ್ಲಿಕಾರ್ಜುನ ಸಮುದಾಯ ಭವನದಲ್ಲಿ ಕೆ.ವ್ಹಿ.ಎಸ್.ಆರ್ ಸಂಯುಕ್ತ ಪ.ಪೂ ಮಹಾವಿದ್ಯಾಲಯದ ವತಿಯಿಂದ ಹಮ್ಮಿಕೊಂಡ ಎನ್‌ಎಸ್‌ಎಸ್ ಶಿಬಿರದ ಸ್ವಚ್ಛ ಭಾರತ ಅಭಿಯಾನ ಕುರಿತು ಉಪನ್ಯಾಸ ನೀಡಿದರು.



ಅತಿಯಾದ ಪ್ಲಾಸ್ಟಿಕ್ ಬಳಕೆಯಿಂದ ಪರಿಸರಕ್ಕೆ ಹಾನಿಯಾಗುತ್ತಿದೆ. ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಲ್ಲಿಸಬೇಕು. ಹೊರಗಡೆಯಿಂದ ಬಿಸಿ ಪದಾರ್ಥಗಳನ್ನು ಮನೆಗೆ ತೆಗೆದುಕೊಂಡು ಹೋಗುವಾಗ ತುಂಬಾ ಎಚ್ಚರಿಕೆ ವಹಿಸಬೇಕು. ಪ್ರಜ್ಞಾವಂತರು, ಸುಶಿಕ್ಷಿತರಾದ ನಾವೆಲ್ಲ ಸಾರ್ವಜನಿಕ ಸ್ಥಳಗಳಲ್ಲಿ ಕಸ, ಪ್ಲಾಸ್ಟಿಕ್‌ಗಳನ್ನು ಹಾಕುವುದನ್ನು ಕಡ್ಡಾಯವಾಗಿ ನಿಲ್ಲಿಸಬೇಕು. ಸ್ವಚ್ಛತೆಯನ್ನು ಕಾಪಾಡುವ ನಿಟ್ಟಿನಲ್ಲಿಯೋಚನೆ ಮಾಡಬೇಕು. ಪೌರಕಾರ್ಮಿಕರಿಗೆ ಗೌರವವನ್ನು ನೀಡಬೇಕೆಂದು ತಿಳಿಸಿದರು.

ಪ್ರಾಚಾರ್ಯ ವ್ಹಿ.ಎಸ್. ದಲಾಲಿ, ಶಿಬಿರಾಧಿಕಾರಿ ಪ್ರದೀಪ ನಾಯಕ ಮಾತನಾಡಿದರು. ಉಪನ್ಯಾಸ ನೀಡಿದ ಪ್ರಾ. ಎಂ.ಸಿ. ಕಟ್ಟಿಮನಿ ಅವರನ್ನು ಸನ್ಮಾನಿಸಲಾಯಿತು. ಗ್ರಾ.ಪಂ ಸದಸ್ಯ ಮಲ್ಲಪ್ಪ ಅಸುಂಡಿ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಆರ್.ಎನ್. ಭಂಡಾರಿ, ಗೋಣೆಪ್ಪ ದುರಗಣ್ಣವರ, ಗ್ರಂಥಪಾಲಕ ಲಕ್ಷ್ಮಣ ದೊಡ್ಡಮನಿ, ಪ್ರೌಢಶಾಲೆ ಎಸ್‌ಡಿಎಂಸಿ ಅಧ್ಯಕ್ಷ ಹನೀಫ್‌ಸಾಬ ಕುಮನೂರ, ರವಿ ಕಿರೆಸೂರ ಸೇರಿದಂತೆ ಮಹಾವಿದ್ಯಾಲಯದ ಸಿಬ್ಬಂದಿ ವರ್ಗ, ಗ್ರಾಮದ ಹಿರಿಯರು ಇದ್ದರು.

ತಾ.ಪಂ ಮಾಜಿ ಸದಸ್ಯ ಪ್ರಹ್ಲಾದ ಹೊಸಳ್ಳಿ ಮಾತನಾಡಿ, ನಮ್ಮ ಮನಸ್ಸು ಸ್ವಚ್ಛವಾಗಿದ್ದರೆ ಏನನ್ನಾದರೂ ಮಾಡಬಹುದು. ನಮ್ಮ ಮನಸ್ಸನ್ನು ಸ್ವಚ್ಛ ಮಾಡಿಕೊಂಡ ನಂತರ ಮನೆ, ಓಣಿ, ಊರು, ತಾಲೂಕು, ಜಿಲ್ಲೆ, ರಾಜ್ಯ, ದೇಶದ ಸ್ವಚ್ಛತೆಗೆ ಗಮನ ನೀಡಬೇಕು. ನಮಗೆ ಸಿಕ್ಕ ಅವಕಾಶದಲ್ಲಿ ಸ್ವಚ್ಛ ಭಾರತ ಯೋಜನೆಯಲ್ಲಿ ತೊಡಗಿಕೊಳ್ಳಬೇಕೆಂದು ಹೇಳಿದರು.

### ಗದಗ ಎಸ್‌ಎಸ್‌ಕೆ ಸಮಾಜದಿಂದ 'ನಮ್ಮೂರ ದಸರಾ' 3ನೇ ದಿನದ ಕಾರ್ಯಕ್ರಮ

# ಸಮಾಜ ಬಾಂಧವರು ಸ್ವಾವಲಂಬಿಗಳಾಗಿದ್ದಾರೆ

**■ವಿಜಯಸಾಕ್ಷಿ ಸುದ್ದಿ, ಗದಗ**

ದಸರಾ ಹಬ್ಬವೆಂದರೆ ಎಸ್‌ಎಸ್‌ಕೆ ಸಮಾದವರಿಗೆ ಧರ್ಮಾಚರಣೆ, ಸಂಭ್ರಮಾಚರಣೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಎಲ್ಲರೂ ಒಟ್ಟಾಗಿ ಆಚರಿಸುವ ಹಬ್ಬವಾಗಿದೆ ಎಂದು ಹುಬ್ಬಳ್ಳಿಯ ಕೆಜಿಎಫ್ ಫೌಂಡೇಶನ್ ಮುಖ್ಯಸ್ಥ ಶ್ರೀಗಂಧ ಗಣೇಶ ಶೇಠ ಹೇಳಿದರು. ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರ್ಬಾರ್ ವೇದಿಕೆಯಲ್ಲಿ ಜರುಗಿದ ನಮ್ಮೂರ ದಸರಾ-2025ರ 3ನೇ ದಿನದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು. ಎಲ್ಲ ಸಮಾಜದ ಬಾಂಧವರನ್ನು ಹತ್ತಿರದಿಂದ ನೋಡಿದ್ದೇನೆ.



ಅದರಲ್ಲಿ ಎಸ್‌ಎಸ್‌ಕೆ ಸಮಾಜ ಬಾಂಧವರು ಸ್ವ-ಉದ್ಯೋಗದಲ್ಲಿ ಸಂತೃಪ್ತಿ ಕಾಣುವ ಮೂಲಕ ಸದೃಢ ಸಮಾಜಕ್ಕೆ ಶಕ್ತಿ ತುಂಬುತ್ತಿದ್ದಾರೆ. ಅವರು ಸ್ವ-ಉದ್ಯೋಗದಿಂದ ಸ್ವಾವಲಂಬಿಯಾಗಿ ಬದುಕಬಹುದೆಂದು ತೋರಿಸಿಕೊಟ್ಟಿದ್ದಾರೆ ಎಂದು ಹೇಳಿದರು. ಬೆಳಗಾವಿಯ ಗಣ್ಯ ಉದ್ಯಮಿ ಶರತ ಕವಟಗಿಮಠ ಸಾಂದರ್ಭಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಸ್‌ಎಸ್‌ಕೆ ಸಮಾಜದ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ಅಧ್ಯಕ್ಷತೆ ವಹಿಸಿದ್ದರು.

ವೇದಿಕೆ ಮೇಲೆ ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ, ದಸರಾ ಕಮಿಟಿ ಚೇರಮನ್ ಅನಿಲ್ ಖಟವಟೆ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಪಂಚ ಕಮಿಟಿ ಸದಸ್ಯರಾದ ವಿಶ್ವನಾಥಸಾ ಖಟವಟೆ, ಸುರೇಶಕುಮಾರ ಬದಿ, ಬಲರಾಮ ಬಸವಾ, ಪರಶುರಾಮ ಬದಿ, ವಿಷ್ಣುಸಾ ಶಿದ್ಲಿಂಗ, ಶ್ರೀನಿವಾಸ ಬಾಂಡಗೆ, ಮಾರುತಿ ಪವಾರ, ಅಂಬಾಸಾ ಖಟವಟೆ, ಮೋತಿಲಾಲಸಾ ಪೂಜಾರಿ, ಗಂಗಾಧರ ಹಬೀಬ, ಗಣಪತಿ ಜಿತೂರಿ, ವಿನೋದ ಬಾಂಡಗೆ, ದಸರಾ ಕಮಿಟಿಯ ಗೌರವ ಕಾರ್ಯದರ್ಶಿ ರಾಘು ಬಾರಡ, ತರುಣ ಸಂಘದ ಶ್ರೀಕಾಂತ ಬಾಕಳೆ, ಸುಧೀರ ಕಾಟಿಗರ, ಮಾಧು ಬದಿ, ನಾಗರಾಜ ಖೋಡೆ, ಶ್ರೀನಿವಾಸ ಬಾಂಡಗೆ, ಮಹಿಳಾ ಮಂಡಳದ ಅಧ್ಯಕ್ಷೆ ಉಮಾಬಾಯಿ ಬೇವಿನಕಟ್ಟಿ, ಗೀತಾಬಾಯಿ ಹಬೀಬ ಮುಂತಾದವರು ಉಪಸ್ಥಿತರಿದ್ದರು.

ಪ್ರಕಾಶ ಬಾಕಳೆ ಸ್ವಾಗತಿಸಿದರು. ಜಿ.ಎನ್. ಹಬೀಬ ನಿರೂಪಿಸಿದರು. ಬಲರಾಮ ಬಸವಾ ವಂದಿಸಿದರು.

ಮುಖ್ಯ ಅತಿಥಿಗಳಾದ ಕರಬಸಪ್ಪ ಹಂಚಿನಾಳ ಮಾತನಾಡಿ, ಎಸ್‌ಎಸ್‌ಕೆ ಸಮಾಜದವರು ದಸರಾ ಹಬ್ಬವನ್ನು ಪ್ರತಿವರ್ಷ ಅದ್ದೂರಿಯಾಗಿ ಆಚರಿಸುತ್ತ ಬರುತ್ತಿದ್ದಾರೆ. ಈ ಸಮಾಜದವರು ಸ್ವ-ಉದ್ಯೋಗಕ್ಕೆ ಹೆಚ್ಚಿನ ಆದ್ಯತೆ ನೀಡಿದಂತೆ ಶಿಕ್ಷಣಕ್ಕೂ ಹೆಚ್ಚು ಆದ್ಯತೆ ನೀಡುವದರ ಜೊತೆಗೆ ಬಡ ಮಕ್ಕಳ ಶಿಕ್ಷಣಕ್ಕೆ ಆರ್ಥಿಕವಾಗಿ ಸಹಾಯ-ಸಹಕಾರ ನೀಡಬೇಕು ಎಂದು ಹೇಳಿದರು.

# ಶಿಬಿರಗಳು ಪ್ರೇರಣಾದಾಯಕ ಕಲಿಕೆಗೆ ಪೂರಕ

**■ವಿಜಯಸಾಕ್ಷಿ ಸುದ್ದಿ, ಗದಗ**

ಕಣವಿ ಗ್ರಾಮದ ಶ್ರೀ ಮ.ಫ. ಆಲೂರ ಹಾಗೂ ಶ್ರೀಮತಿ ಪಾ.ನಿಂ. ದೊಡ್ಡಗೌಡರ ಸರ್ಕಾರಿ ಪ್ರೌಢಶಾಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ವಿದ್ಯಾರ್ಥಿಗಳಿಗಾಗಿ ಸಂಭ್ರಮದ ದಸರಾ-ಸಂತಸದ ಕಲಿಕಾ ಶಿಬಿರ ನೆರವೇರಿತು.

ತಾಲೂಕಾ ಅಕ್ಷರ ದಾಸೋಹ ಸಹ ನಿರ್ದೇಶಕ ಶಂಕರ ಹಡಗಲಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವರ್ಗ ಕೋಣೆಯ ಕಲಿಕೆ ನಿತ್ಯ ಜೀವನದಲ್ಲಿ ಬಳಕೆಯಾಗಬೇಕು. ವರ್ಗ ಕೋಣೆಯಾಚೆ ಇಂತಹ ಚಟುವಟಿಕೆಗಳು ಸಂತಸದಾಯಕ ಕಲಿಕೆಯನ್ನು ಉಂಟುಮಾಡುತ್ತವೆ ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಇಂತಹ ಶಿಬಿರಗಳು ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಕಲಿಕೆಗೆ



ಪೂರಕವಾಗಿವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಮಾತನಾಡಿ, ತರಗತಿ ಶಿಕ್ಷಣದ ಜೊತೆಗೆ ಸಾಂಸ್ಕೃತಿಕ ಮತ್ತು ದೈಹಿಕ ಶಿಕ್ಷಣ ವಿದ್ಯಾರ್ಥಿಗಳಲ್ಲಿ ಸರ್ವತೋಮುಖ ವಿಕಾಸ ಉಂಟುಮಾಡುತ್ತದೆ ಎಂದು ಹೇಳಿದರು.

ಮುಖ್ಯ ಶಿಕ್ಷಕ ಎಸ್.ಆಯ್. ಬಡಿಗೇರ ಪ್ರಾಸ್ತಾವಿಕವಾಗಿ ಮಾತನಾಡಿ, ಇಂತಹ ಶಿಬಿರಗಳು ಮಕ್ಕಳಲ್ಲಿ ಒತ್ತಡ ಕಡಿಮೆ ಮಾಡಿ ಸಂತಸದಿಂದ ಕಲಿಯಲು ಸಹಾಯಕವಾಗಿವೆ ಎಂದು ಹೇಳಿದರು. ಎಸ್‌ಡಿಎಮ್‌ಸಿ ಅಧ್ಯಕ್ಷರು ಹಾಗೂ ಸದಸ್ಯರು, ಗ್ರಾಮದ ಗುರು-ಹಿರಿಯರು, ಪ್ರಾಥಮಿಕ, ಪ್ರೌಢ ಶಾಲೆಗಳ ಶಿಕ್ಷಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಎಮ್. ಎಸ್. ಗಾರವಾಡ ಕಾರ್ಯಕ್ರಮ ನಿರೂಪಿಸಿದರು. ಎಸ್.ಜೆ. ಮೂಲಿಮನಿ ವಂದಿಸಿದರು.




ನರಗುಂದ ಶಿಶು ಅಭಿವೃದ್ಧಿ ಯೋಜನೆ ವತಿಯಿಂದ ಶಿರೋಳ ಗ್ರಾಮದ ಆರೋಗ್ಯ ಉಪಕೇಂದ್ರದಲ್ಲಿ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಜರುಗಿತು. ಪೋಷಣ್ ಅಭಿಯಾನದ ರಾಜ್ಯ ಸಂಯೋಜಕ ಶೇಖರ ಮೂಲಂಗಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಮೇಲ್ವಿಚಾರಕಿ ಭಾರತಿ ಕಾಲಚೆಟ್ಟಿ, ಪರಿಮಳಾ ಹೂಗಾರ, ಪೋಷಣ್ ಸಂಯೋಜಕರಾದ ಮಂಜುನಾಥ ಗುಗ್ಗರಿ ಜಿಲ್ಲಾ ಸಹಾಯಕ ಪವನ್ ಕಾಟೀಗಾರ, ಗರ್ಭಿಣಿಯರು, ಮಕ್ಕಳು, ತಾಯಂದಿರು, ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಪಂ. ದೀನ್‌ದಯಾಳರ ಜಯಂತಿ ಆಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಪಂಡಿತ್ ದೀನ್ ದಯಾಳ್ ಉಪಾಧ್ಯಾಯರ ಜಯಂತಿ ಆಚರಣೆ ಮಾಡಲಾಯಿತು. ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಎಂ.ಎಸ್. ಕರಿಗೌಡರ ಮಾತನಾಡಿ, ಪಂಡಿತ್ ದೀನ್ ದಯಾಳ್ ಉಪಾಧ್ಯಾಯರು ಬೆಳೆದು ಬಂದ ಹಾದಿ ಹಾಗೂ ಸಂಘದ ಶ್ರೇಯಸ್ಸಿಗಾಗಿ ಶ್ರಮಿಸಿದ ಕುರಿತು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಎಂ.ಎಂ.




ಹಿರೇಮಠ, ಜಗನ್ನಾಥ್ ಭಾಂಡಗೆ, ವಿಜಯಕುಮಾರ್ ಗಡ್ಡಿ, ಅನಿಲ್ ಅಬ್ಬಿಗೇರಿ, ಸುರೇಶ ಮರಳಪ್ಪನವರ, ರಮೇಶ್ ಸಜ್ಜಗಾರ, ಅರವಿಂದ್ ಕೆಲೂರು, ರಾಚಯ್ಯ ಹೊಸಮಠ್, ನಿರ್ಮಲಾ ಕೊಳ್ಳಿ, ವಿಜಯಲಕ್ಷ್ಮೀ ಮಾನ್ವಿ, ರವಿ ಮಾನ್ವಿ, ಅಶ್ವಿನಿ ಜಗತಾಪ್, ಶಾರದಾ ಸಜ್ಜನ, ಅಕ್ಕಮ್ಮ ವಸ್ತ್ರದ, ಕಮಲಾಕ್ಷಿ ಗೊಂದಿ, ಜಯಶ್ರೀ ಅಣ್ಣಿಗೇರಿ, ಸ್ವಾತಿ ಅಕ್ಕಿ, ಸಾವಿತ್ರಿ ಪಾಟೀಲ, ರೇಖಾ ಬಂಗಾರ ಶೆಟ್ಟರ, ಅಪ್ಪಣ್ಣ ತೆಂಗಿನಕಾಯಿ, ಎಸ್ಪಿ ಚೌಡಿ, ಪ್ರೀತಿ ಶಿವಪ್ಪನಮಠ, ಶೆಕವ್ವ ಮಾಸರೆಡ್ಡಿ, ರೇಖಾ ಗೌಳಿ, ನಾಗರಾಜ್ ಗುರಿಕಾರ್, ಮೋಹನ್ ಕೋರಿ, ಶಂಕರ್ ವಾಲಿ ಮುಂತಾದವರಿದ್ದರು. ಗದಗ ನಗರ ಮಂಡಲ ಪ್ರಧಾನ ಕಾರ್ಯದರ್ಶಿ ಸುರೇಶ್ ಚಿತ್ತರಗಿ ನಿರೂಪಿಸಿದರು, ಶಂಕರ್ ಕಾಕಿ ವಂದಿಸಿದರು.

# ಉಡಿ ತುಂಬುವ ಕಾರ್ಯಕ್ರಮ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ನವರಾತ್ರಿ ಉತ್ಸವದ ಅಂಗವಾಗಿ ಮುಳಗುಂದ ನಾಕಾದ ಹತ್ತಿರವಿರುವ ಮರಾಠಾ ವಿದ್ಯಾವರ್ಧಕ ಸಂಘದ ಶ್ರೀ ಜಗದಂಬಾ ದೇವಸ್ಥಾನದಲ್ಲಿ ಸೆ. 26ರಂದು ಸಾಯಂಕಾಲ 6.30ಕ್ಕೆ ಹ.ಬ.ಫ. ಶ್ರೀ ರಮೇಶ ಮ.ಶೇಂಡ್ಗೆ ಇವರಿಂದ ಪುರಾಣ ಪ್ರವಚನ ನಡೆಯಲಿದೆ. ನಂಯಿತಯಿರ ಮಹಿಳಾ ಮಂಡಳದವರಿಂದ ದಾಂಡಿಯಾ ನೃತ್ಯ, ರಾತ್ರಿ 7.30ಕ್ಕೆ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಾಗೂ ಅನ್ನಸಂತರ್ಪಣೆ ಜರುಗುವುದು. ಮಹಾಪ್ರಸಾದ ಸೇವೆಯನ್ನು ಶ್ರೀ ಮೋಹನರಾವ್ ಯಲ್ಲಪ್ಪ ಗ್ವಾರಿ ಸಹೋದರರು ವಹಿಸಿಕೊಂಡಿದ್ದಾರೆ.

ಈ ಧಾರ್ಮಿಕ ಕಾರ್ಯಕ್ರಮಕ್ಕೆ ಸಮಾಜ ಬಾಂಧವರು, ಮಹಿಳೆಯರು, ಭಕ್ತಾದಿಗಳು, ಅಧಿಕ ಸಂಖ್ಯೆಯಲ್ಲಿ ಆಗಮಿಸಿ ದೇವಿ ಕೃಪೆಗೆ ಪಾತ್ರರಾಗಬೇಕೆಂದು ಸಂಘದ ಅಧ್ಯಕ್ಷ ಅರುಣಕುಮಾರ ಬಿ.ಚವ್ಹಾಣ, ಗೌರವ ಕಾರ್ಯದರ್ಶಿ ಸುರೇಶ ಎಸ್.ಬೇಂದ್ರೆ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

ನವರಾತ್ರಿ ಅಂಗವಾಗಿ ಶ್ರೀದೇವಿ ಪುರಾಣ ಪ್ರವಚನದ ನಂತರ ಭಕ್ತಾದಿಗಳಿಗೆ ನಿತ್ಯ ಪ್ರಸಾದ ವಿತರಣೆಯನ್ನು ಮಾಡುತ್ತಿರುವ ಸಮಾಜದ ಹಿರಿಯರಾದ ಪರಶುರಾಮ ಯಲ್ಲಪ್ಪ ಜಾಧವ, ಶಿವಾಜಿರಾವ ಪಾವನ, ಮಂಜುನಾಥ ಎನ್.ಮಾನೆ ಮಯಿತ್ತು ಮಾರುತಿರಾವ ಆರ್.ಅರಳಿಕಟ್ಟಿ ಇವರುಗಳಿಗೆ ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ.

### ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆ

# ಅ. 7ಕ್ಕೆ ವಿಶೇಷ ಉಪನ್ಯಾಸ, ಸಾಧಕರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಅಕ್ಟೋಬರ್ 7ರಂದು ಜಿಲ್ಲಾ ಮಟ್ಟದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸುವ ಕುರಿತು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ಅಧ್ಯಕ್ಷತೆಯಲ್ಲಿ ಬುಧವಾರ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಜರುಗಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಪ್ರತಿವರ್ಷದಂತೆ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅದ್ದೂರಿಯಾಗಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಸಮಾಜ ಬಾಂಧವರ ಸಹಕಾರದಿಂದ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲು ಕ್ರಮವಹಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಅಕ್ಟೋಬರ್ 7ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಿಂದ ಶ್ರೀ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರದ ಭವ್ಯ ಮೆರವಣಿಗೆಯನ್ನು ಆಯೋಜಿಸಲಾಗುತ್ತದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮೆರವಣಿಗೆಯಲ್ಲಿ ವಿವಿಧ ಕಲಾತಂಡಗಳು ಭಾಗವಹಿಸಿ, ಮೆರವಣಿಗೆಗೆ ಮೆರಗು ನೀಡುವಂತೆ ಇಲಾಖೆಯ ಅಧಿಕಾರಿಗಳು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಹೇಳಿದರು.



ಶ್ರೀ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರದ ಮೆರವಣಿಗೆಯಲ್ಲಿ ಹೆಚ್ಚಿನ ಜನರು ಪಾಲ್ಗೊಳ್ಳುವಂತೆ ವ್ಯಾಪಕ ಪ್ರಚಾರ ಮಾಡಲು ಕ್ರಮ ವಹಿಸಬೇಕು. ಕರ್ನಾಟಕ ವಿದ್ಯಾವರ್ಧಕ ಸಂಘದ ಡಾ. ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗುತ್ತದೆ. ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ, ಸಾಧಕರಿಗೆ ಸನ್ಮಾನ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಿ ಸತ್ಕರಿಸಲಾಗುತ್ತದೆ ಎಂದು ಅವರು ತಿಳಿಸಿದರು.

ಶ್ರೀ ಮಹರ್ಷಿ ವಾಲ್ಮೀಕಿಯವರ ಕುರಿತು ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆಗಳನ್ನು ಆಯೋಜಿಸುವಂತೆ ಮತ್ತು ಜಯಂತಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಯುವ ಸಮೂಹ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಮಾಡಬೇಕೆಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಪರಿಶಿಷ್ಟ ಪಂಗಡದ ಅಹವಾಲುಗಳನ್ನು ಆಲಿಸಿದ ಜಿಲ್ಲಾಧಿಕಾರಿಗಳು, ಮುಂದಿನ ಜಾಗೃತ ಸಭೆಯಲ್ಲಿ ಚರ್ಚಿಸಿ, ಸಮಸ್ಯೆಗಳಿಗೆ ಪರಿಹಾರ ಸೂಚಿಸುವುದಾಗಿ ತಿಳಿಸಿದರು. ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಸಾರ್ವಜನಿಕರ ವಿಶೇಷವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯಗಳ ಅಹವಾಲು, ಸಮಸ್ಯೆಗಳನ್ನು ಸ್ವೀಕರಿಸಿ ಜಿಲ್ಲಾ ಜಾಗೃತಿ ಸಭೆಯಲ್ಲಿ ಮಂಡಿಸುವಂತೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪಿ. ಶುಭ ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು. ಸಭೆಯಲ್ಲಿ ಧಾರವಾಡ ತಹಸೀಲ್ದಾರ ಡಾ. ಡಿ.ಎಚ್. ಹೂಗಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಾಲ್ಮೀಕಿ ಸಮುದಾಯದ ಪ್ರಮುಖರು ಹಾಗೂ ಇತರ ಸಮಾಜಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

# ದೇಶದ ಏಕತೆಯನ್ನು ಕಾಪಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕರ್ನಾಟಕ ಭವನದಲ್ಲಿ ಬೃಹತ್ ಮಟ್ಟದಲ್ಲಿ ಮುಸ್ಲಿಂ ಏಕತಾ ಕಾನ್ಫರೆನ್ಸ್ ನಡೆಯಿತು. ನಗರದಲ್ಲಿ ಅಂಜುಮನ್ ಚುನಾವಣೆಯಲ್ಲಿ ಸುಮಾರು 41 ಅಭ್ಯರ್ಥಿಗಳು ಕಣದಲ್ಲಿದ್ದು, ಪರಸ್ಪರ ಪ್ರೀತಿ-ವಿಶ್ವಾಸದಿಂದ ಚುನಾವಣೆ ನಡೆಸುವಂತೆ ಹಾಗೂ ಏಕತೆಯಿಂದ ಇರುವಂತೆ ಹಜರತ್ ಇರ್ತಿಗಾರ್ ಅಹಮದ ಕಾಶ್ಮೀರವರು ಅಭ್ಯರ್ಥಿಗಳಲ್ಲಿ ವಿನಂತಿಸಿದರು.




ಜಮೈತೆ ಉಲ್ಮಾ ಗದಗನ ಅಧ್ಯಕ್ಷ ಹಜರತ ಇನಾಯತುಲ್ಲಾ ಪೀರಜಾದೆ ಮಾತನಾಡಿ, ಅಂಜುಮನ್ ಚುನಾವಣೆ ಸ್ಪರ್ಧಿಸುವ ಯುವಕರು ಸಮಾಜದ ಅಭಿವೃದ್ಧಿಗಾಗಿ ಕೆಲಸ ಮಾಡಿ. ಶಿಕ್ಷಣ ಹಾಗೂ ಸರ್ಕಾರದ ಸವಲತ್ತುಗಳನ್ನು ಪಡೆದುಕೊಳ್ಳಬೇಕೆಂದು ವಿನಂತಿಸಿದರು.

ಮೌಲಾನ ಪಲ್ಲಿದರವರು ಮಾತನಾಡಿ, ಸಮಾಜದ ಅಭಿವೃದ್ಧಿಗಾಗಿ ಪ್ರಾಮಾಣಿಕ ಸೇವೆ ಮಾಡಬೇಕು. ಚುನಾವಣೆಯು ಸೌಹಾರ್ದತೆಯಿಂದ ಸಾಗಲಿ. ಈ ದೇಶದ ಸೇವೆಯನ್ನು ಮಾಡಲು ದೇಶದ ಎಲ್ಲಾ ಮುಸಲ್ಮಾನರು ಸದಾಕಾಲ ಮೊದಲಿನ ಸಾಲಿನಲ್ಲಿ ನಿಲ್ಲುತ್ತಾರೆ ಎಂದರು.

ವೇದಿಕೆ ಮೇಲೆ ಮೌಲಾನ ಮುಫ್ತಿ ಜಾಕ್ರಿಯಾ, ಮೌಲಾನಾ ಅಬ್ದುಲ್ ರಹೀಂ ಚಂದುನವರ, ಮೌಲಾನ ಅಬ್ದುಲ್‌ಶಂಶುದಿನ್, ಮೌಲಾನಾ ರಿಯಾಜ್ ಬ್ಯಾಳಿರೊಟ್ಟಿ, ಮೌಲಾನ ಅಬ್ದುಲ್ ಶಂಶುದಿನ್, ಮೌಲಾನಾ ರಿಯಾಜ್ ಬ್ಯಾಳಿರೊಟ್ಟಿ, ನ್ಯಾಯವಾದಿಗಳು ಎಸ್.ಕೆ. ನದಾಫ್, ಮುನ್ನ ಶೇಖ್, ಸೈಯದ್ ಖಾಲಿದ್ ಕೊಪ್ಪಳ, ಮುಫ್ತಿ ಸಮದ ಕಾಸ್ಮಿ, ಹಫೀಜ್ ಅನ್ವರ್ ಮುಧೋಳ್, ಹಫೀಜ್ ಸರ್ಫರಾಜ್ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.



ಗದಗ; ನವರಾತ್ರಿ ಹಬ್ಬದ ಮೂರನೆಯ ದಿನದಂದು ಮುಳಗುಂದ ರಸ್ತೆಯ ಸಿದ್ದಗಂಗಾ ನಗರದ ದುರ್ಗಾಪರ್ಮೇಶ್ವರಿ ಮಹಿಳಾ ಗ್ರೂಪ್‌ನ ಸದಸ್ಯರು ನೀಲಿ ಸೀರೆಯನ್ನುಟ್ಟು ಸಂಭ್ರಮಿಸಿದರು.

### 'ನಾದ ಬ್ರಹ್ಮನಿಗೆ ನಮನ' ಕುಂಚ, ಕಾವ್ಯ, ನಾದ ನಮನ ಕಾರ್ಯಕ್ರಮ

# ಪುಟ್ಟರಾಜರು ನಡೆದಾಡಿದ ನೆಲ ಪಾವನ



■ ವಿಜಯಸಾಕ್ಷಿ ಸುದ್ದಿ, ಗದಗ

ಅಂಧ-ಅನಾಥರ ಆಶ್ರಯದಾತ, ಸಂಗೀತದಿಂದ ಜಗದ ಬೆಳಕಾದ, ಬೇಡವಾದ ಬದುಕನು ಬೆಳಗುವಂತೆ ಮಾಡಿದ ಸರಸ್ವತಿಯ ಪುತ್ರ, ಸೋತು ಹೋದವರ ಕತ್ತಲ ಬಾಳಿಗೆ ಗಾನಯೋಗಿ ಪುಟ್ಟರಾಜ ಗವಾಯಿಗಳು ಬೆಳಕಾಗಿದ್ದಾರೆ ಎಂದು ಸಂಗೀತ ಕಲಾವಿದೆ, ಬಂಜಾರ ಭಾಷಾ ಅಕಾಡೆಮಿ ಸದಸ್ಯರಾದ ಸಾವಿತ್ರಿ ಲಮಾಣಿ ಅಭಿಪ್ರಾಯಪಟ್ಟರು.

ನವಜ್ಯೋತಿ ಸೇವಾ ಸಂಸ್ಥೆ ನಾಗಾವಿ, ನವಜ್ಯೋತಿ ಸಮಗ್ರ ವ್ಯಸನಮುಕ್ತಿ ಹಾಗೂ ಪುನರ್ವಸತಿ ಕೇಂದ್ರ ಗದಗ, ಪೂರ್ಣತಾರೆ ಜನಸೇವಾ ಸಂಸ್ಥೆ ಗದಗ ಹಾಗೂ ನಿರ್ಮಲ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಮುಂಡರಗಿ ಸಹಯೋಗದಲ್ಲಿ ಗಾನಯೋಗಿ ಡಾ. ಪಂ ಪುಟ್ಟರಾಜ ಗವಾಯಿಗಳ 15ನೇ ಪುಣ್ಯ ಸ್ಮರಣಾರ್ಥ 'ನಾದ ಬ್ರಹ್ಮನಿಗೆ ನಮನ' ಕುಂಚ, ಕಾವ್ಯ, ನಾದ ನಮನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ಡಾ. ಅನ್ನದಾನಿ ಹಿರೇಮಠ ಮಾತನಾಡಿ, ತ್ರಿಭಾಷಾ ಪಂಡಿತರಾಗಿ ಸಾಹಿತ್ಯ ಲೋಕಕ್ಕೆ ಬೆಳಕು ಚೆಲ್ಲಿ, ನಾಟಕ ಕಂಪನಿಗಳನ್ನು ಆರಂಭಿಸಿ ಹಲವಾರು ಕಲಾವಿದರ ಬದುಕನ್ನು ಕಟ್ಟಿದ ಕೀರ್ತಿ ಪುಟ್ಟರಾಜರಿಗೆ ಸಲ್ಲುತ್ತದೆ. ಇವರ ಅನಾರೋಗ್ಯದ ಸಮಯದಲ್ಲಿ ನೂರಾರು ವೈದ್ಯರು ಸೇವೆ ಮಾಡಿದರು. ಈ ಸಂದರ್ಭದಲ್ಲಿ ಜಾತಿ-ಧರ್ಮವನ್ನು ಮರೆತು ಪ್ರಾರ್ಥಿಸಿದರು. ಇವರ ಅನರ್ಘ್ಯ ಸೇವೆಗೆ ನಾಡಿನ ಜನರೆಲ್ಲ ಕಂಬನಿ ಮಿಡಿದರು ಎಂದು ನುಡಿ ನಮನ ಸಲ್ಲಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ನವಜ್ಯೋತಿ ಸೇವಾ ಸಂಸ್ಥೆಯ ಕಾರ್ಯದರ್ಶಿ ಬಸವರಾಜ ಬೇವಿನಮರದ, ನಮ್ಮ ಆರಾಧ್ಯ ದೈವ ಪುಟ್ಟರಾಜರು ನಮ್ಮ ನಾಡು ಕಂಡ ಶ್ರೇಷ್ಠ ದೇವರು. ಇವರು ನಡೆದಾಡಿದ ನೆಲ ಪಾವನ. ಅಂತಹ ನೆಲದಲ್ಲಿ ನಾವು ಇದ್ದು, ಅವರನ್ನು ನೋಡಿದ ಭಾಗ್ಯ ನಮ್ಮದಾಗಿದೆ. ನಮ್ಮ ವ್ಯಸನ ಮುಕ್ತಿ ಕೇಂದ್ರದಲ್ಲಿ ಹಲವಾರು ವ್ಯಸನಿಗಳನ್ನು ಬದಲಾಯಿಸಿ ಹೊಸ ಬದುಕನ್ನು ಕಟ್ಟಿದ್ದೇವೆ. ಇದರ ಸೇವೆ ನಮಗೆ ತೃಪ್ತಿ ತಂದಿದೆ ಎಂದರು.

ವೇದಿಕೆಯ ಮೇಲೆ ನಿರ್ಮಲಾ ತರವಾಡೆ, ಹನುಮಂತಗೌಡ ಪಾಟೀಲ, ಕಳಕಪ್ಪ ತಳವಾರ ಯಲಬುರ್ಗಾ, ಶ್ವೇತಾ ಕೋಳೇಕರ ಉಪಸ್ಥಿತರಿದ್ದರು. ಕಳಕೇಶ ಅರಿಕೇರಿ, ಎಸ್.ಬಿ. ಭಜಂತ್ರಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಬಸವರಾಜ ನೆಲಜೇರಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಕಳಕೇಶ ಅರಿಕೇರಿ ಪ್ರಕಾಶ ಕಮ್ಮಾರ ಸ್ವರ ನಮನ ಸಲ್ಲಿಸಿದರು. ಎಸ್.ಬಿ. ಭಜಂತ್ರಿ ಶಹನಾಯಿ ವಾದನದ ಮೂಲಕ ನಮನ ಸಲ್ಲಿಸಿದರು. ಬಸವರಾಜ ನೆಲಜೇರಿ ಚಿತ್ರ ರಚಿಸಿ ಕುಂಚ ನಮನ ಸಲ್ಲಿಸಿದರು. ಕಾವ್ಯ ನಮನದಲ್ಲಿ ಮಂಜುನಾಥ ಡೋಣಿ, ಶಾರದಾ ಬಾಣದ, ಕೊಟ್ರೇಶ ಜವಳಿ, ಗಣೇಶಗೌಡ ಪಾಟೀಲ, ಗಣೇಶ ಬಡಿಗೇರ, ಕಸ್ತೂರಿ ವೀರಣ್ಣ ಕಡಗದ ಕಾವ್ಯ ನಮನ ಸಲ್ಲಿಸಿದರು.

### ಅಡವಿಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ: ಶ್ರೀದೇವಿ ಪುರಾಣ ಪ್ರವಚನ

# ಧಾರ್ಮಿಕ ಮನೋಭಾವ ಹೆಚ್ಚಿಸುವ ಕೆಲಸವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅವರಾತ್ರಿ, ಶಿವರಾತ್ರಿ, ನವರಾತ್ರಿಯ ವಿಶೇಷ ಬೆಳಕೇ ಶ್ರೀದೇವಿಯ ದಿವ್ಯಶಕ್ತಿ ಎಂದು ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಹೇಳಿದರು.

ನಗರದ ಮುಳಗುಂದನಾಕಾ ಬಳಿಯ ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ 45ನೇ ವರ್ಷದ ದಸರಾ ಮಹೋತ್ಸವ ಮತ್ತು ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.




ರಾಮಕೃಷ್ಣ ಪರಮಹಂಸರು ಶ್ರೀದುರ್ಗಾ ಮಾತೆಯನ್ನು ಆರಾಧಿಸಿ ದೇವಿಯೇ ತಾವಾಗಿದ್ದರು. ಈ ಸಂದರ್ಭದಲ್ಲಿ ಸ್ವಾಮಿ ವಿವೇಕಾನಂದರಿಗೆ ಅವರು ಶ್ರೀದೇವಿಯ ಬಗ್ಗೆ ಅರಿವನ್ನು ಮೂಡಿಸಿದರು. ಶ್ರೀದೇವಿಯ ದುಷ್ಟರ ಸಂಹಾರ, ಶಿಷ್ಟರ ರಕ್ಷಣೆಯೇ ನವರಾತ್ರಿ ಆಚರಣೆಯಾಗಿದೆ ಎಂದರು ಹೇಳಿದರು.

ಮಹಿಳೆಯರು ನವರಾತ್ರಿಯ ಸಂದರ್ಭಗಳಲ್ಲಿ ಶ್ರೀದೇವಿ ಆರಾಧನೆ ಮಾಡುತ್ತಾರೆ. ಇಂದಿನ ಆಧುನಿಕ ದಿನಮಾನಗಳಲ್ಲಿ ಯುವ ಜನರಲ್ಲಿ ಧಾರ್ಮಿಕ ಮನೋಭಾವನೆ ಹೆಚ್ಚಿಸುವ ಕೆಲಸವಾಗಬೇಕಿದೆ. ಸಮಾಜದಲ್ಲಿ ಧರ್ಮ ಜಾಗೃತಿ ಮೂಡಿಸಲು ಇಂತಹ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಎಲ್ಲರೂ ಪಾಲ್ಗೊಳ್ಳಬೇಕು. ಶ್ರೀಮಠದಲ್ಲಿ ಜರುಗುವ ಶ್ರೀದೇವಿ ಪುರಾಣ ಪ್ರವಚನ ಆಲಿಸಿ, ಜೀವನ ಪಾವನ ಮಾಡಿಕೊಳ್ಳಬೇಕು ಎಂದು ಮಹೇಶ್ವರ ಸ್ವಾಮೀಜಿ ಹೇಳಿದರು.

ಶ್ರೀಅನ್ನಪೂರ್ಣೇಶ್ವರ ಸನ್ನಿಧಿಯಲ್ಲಿ ಡಾ. ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ಪುರಾಣ ಪ್ರವಚನ ನಡೆಯಿತು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು.

ಪೂಜಾ ಸಮಿತಿ ಅಧ್ಯಕ್ಷರಾದ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ ಗೀತಾ ಎಂ.ಹೂಗಾರ, ಸಹಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ವಿವಿಧ ಭಕ್ತಿಸೇವೆ ವಹಿಸಿದ್ದ ಗಣ್ಯರನ್ನು ಸನ್ಮಾನಿಸಲಾಯಿತು. ಶ್ರೀ ಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ ಸ್ವಾಗತಿಸಿದರು. ವಿ.ಎಂ. ಕುಂದ್ರಾಳಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಅಪ್ಪುರಾಜ ಭದ್ರಕಾಳಿಮಠ ವಂದಿಸಿದರು.

ದತ್ತಾ ಪ್ರಾಪರ್ಟಿಸ್ ವ್ಯವಸ್ಥಾಪಕ ನಿರ್ದೇಶಕ ನಾರಾಯಣ ಕುಡತರಕರ, ಶ್ರೀ ಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷ ಎಸ್.ಪಿ. ಸಂಶಿಮಠ, ಅಧ್ಯಕ್ಷ ಸದಾಶಿವಯ್ಯ ಮದರಿಮಠ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ ಮುಂತಾದ ಗಣ್ಯರು ವೇದಿಕೆಯಲ್ಲಿದ್ದರು.

# ಅರಿವಿನ ಮಾರ್ಗ ತೋರುವವನೇ ಗುರು



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಅರಿವಿನ ಮಾರ್ಗ ತೋರುವವನೇ ಗುರು ಎಂದು ಸರಕಾರಿ ಪದವಿಪೂರ್ವ ಮಾಹಾವಿದ್ಯಾಲಯದ ಪ್ರಾಚಾರ್ಯ ವಿ.ಕೆ. ದ್ಯಾಮನಗೌಡರ ಹೇಳಿದರು.

ಅವರು ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಐಕ್ಯೂಎಸಿ ಸಹಯೋಗದಲ್ಲಿ ಜರುಗಿದ ಓರಿಯಂಟೇಶನ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಮಕ್ಕಳಿಗೆ ನಿತ್ಯ ಅರಿವಿನ ಮಾರ್ಗದಲ್ಲಿ ಸಾಗಲು ಗುರು ಒಂದಲ್ಲಾ ಒಂದು ಸಂದರ್ಭದಲ್ಲಿ ಹೇಳುತ್ತಾ ಬರುತ್ತಾರೆ. ಗುರುಗಳ ಅರಿವಿನ ಮಾತುಗಳು, ಮೌಲ್ಯಯುತವಾಗಿರುತ್ತವೆ. ಗುರುಗಳನ್ನು ಅನುಕರಣೆ ಮಾಡಿದಲ್ಲಿ ವಿದ್ಯಾರ್ಥಿಗಳು ಸುಂದರ ಬದುಕು ಕಟ್ಟಿಕೊಳ್ಳಲು ಸಹಕಾರಿಯಾಗುತ್ತದೆ. ಗುರುಗಳ ಮಾರ್ಗದಲ್ಲಿ ನಡೆದರೆ ಜೀವನದಲ್ಲಿ ಸೋತ ಉದಾಹರಣೆಗಳೇ ಇಲ್ಲ ಎಂದರು.

ಡಾ. ಕಲ್ಲಯ್ಯ ಹಿರೇಮಠ ಮಾತನಾಡಿ ಬದುಕಿನುದ್ದಕ್ಕೂ ಭಾಷಾ ಕೌಶಲ್ಯ ಅಗತ್ಯವಾಗಿದ್ದು, ಓದುವುದು, ಬರೆಯುವುದು, ಮಾತನಾಡುವ ಕೌಶಲ್ಯಗಳು ಇಂದು ತುಂಬಾ ಅಗತ್ಯವಿದೆ ಎಂದರು.

ಅಧ್ಯಕ್ಷತೆಯನ್ನು ಪ್ರಾಚಾರ್ಯ ಆರ್.ಎಂ. ಕಲ್ಲನಗೌಡರ ವಹಿಸಿದ್ದರು. ಪ್ರಶಾಂತ ಹುಲಕುಂದ, ಅನುಪಮಾ, ನಾಗರಾಜ ಎ, ವಸಂತಕುಮಾರ ಕೆ, ವಿಠೋಭಾ ಮಾಲೋದಕರ ಇದ್ದರು.


**ಪುರಸಭೆ ಕಾರ್ಯಾಲಯ, ಲಕ್ಷ್ಮೇಶ್ವರ**

ತಾ: ಲಕ್ಷ್ಮೇಶ್ವರ ಜಿ: ಗದಗ

e-mail: itstaff_ulb_laxmeshwar@yahoo.co.in

Website:www.lakmishwaratown.mrc.gov.in

Fax no:08487-272916 Phone:08487-272916

ಕಂ/ಪುಸಲ/ತಾಂ.ವಿ/ಇ-ಟೆಂಡರ್/15ನೇಹಣಕಾಸು/ಪು.ನಿಧಿ/ವಹಿ/2025-26 ದಿ:25-09-2025

**ಅಲ್ಪಾವಧಿ ಇ-ಟೆಂಡರ್ ಪ್ರಕಟಣೆ**

**(ಇ-ಪ್ರೋಕ್ಯೂರಮೆಂಟ್ ಮೂಲಕ)**

ಲಕ್ಷ್ಮೇಶ್ವರ ಪುರಸಭೆಯ ಸನ್ 2025-26 ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನದಲ್ಲಿ 8 ಕಾಮಗಾರಿ ಒಟ್ಟು 125.10 ಲಕ್ಷಗಳಿಗೆ ಹಾಗೂ ಸನ್ 2025-26 ನೇ ಸಾಲಿನ ಪುರಸಭೆ ನಿಧಿಯಡಿಯಲ್ಲಿ 3 ಕಾಮಗಾರಿ ಅಂದಾಜು ಮೊತ್ತ **ರೂ 11.23 ಲಕ್ಷ**ಗಳಿಗೆ ಒಟ್ಟು 11 ಕಾಮಗಾರಿಗಳ ಅಂದಾಜು ಮೊತ್ತ **136.33 ಲಕ್ಷ**ಗಳಿಗೆ ಕೆ.ಟಿ.ಟಿ.ಪಿ ಕಾಯ್ದೆ ಅಧಿನಿಯಮ 2000 ರನ್ವಯ ಈ ಕೆಳಗಿನಂತೆ ಇಂಡೆಂಟ್‌ಗಳಲ್ಲಿ ಇ ಟೆಂಡರ್‌ಗಳನ್ನು ಆಹ್ವಾನಿಸಿದ್ದು ಅರ್ಹ ಬಿಡ್‌ದಾರರು ಟೆಂಡರ್‌ನ್ನು ಇ-ಪ್ರೋಕ್ಯೂರಮೆಂಟ್ ಪೋರ್ಟಲ್ **https://kppp.karnataka.gov.in** ಠೇವಣಿ (ಇಎಂಡಿ) ಮತ್ತು ಟೆಂಡರ್ ಫೀಯನ್ನು ಇ-ಪ್ರೋಕ್ಯೂರಮೆಂಟ್ ಪೋರ್ಟಲ್‌ನಲ್ಲಿ ಸೂಚಿಸಿದಂತೆ ಪಾವತಿಸಿ ಭಾಗವಹಿಸಬಹುದಾಗಿದೆ. ಟೆಂಡರ ಸಲ್ಲಿಸುವ ಕೊನೆಯ **ದಿನಾಂಕ: 06-10-2025 ರ ಸಂಜೆ 4.00** ಗಂಟೆಯವರೆಗೆ ಟೆಂಡರ ದಿನಾಂಕಗಳನ್ನು ನಿಗಧಿಪಡಿಸಲಾಗಿದೆ. ಹಾಗೂ ಟೆಂಡರ್‌ಗೆ ಸಂಬಂಧಿಸಿದ ಯಾವುದೆ ಬದಲಾವಣೆಗಳು ಅಥವಾ ತಿದ್ದುಪಡಿಗಳನ್ನು E-portal ನಲ್ಲಿ ಪ್ರಕಟಿಸಲಾಗುವುದು.

| ಅ. ನಂ. | ಕಾಮಗಾರಿಯ ಇಂಡೆಂಟ್ ವಿವರ | ಮೀಸಲಾತಿ ನೀಡಿದ ವಿವರ | ಅಂದಾಜು ಮೊತ್ತ(ರೂ. ಲಕ್ಷಗಳಲ್ಲಿ) |
|---|---|---|---|
| 1 | DMA/2025-26/RD/WORK_INDENT48949 | OTHERS | 17.00 |
| 2 | DMA/2025-26/WS/WORK_INDENT49277 | OTHERS | 12.00 |
| 3 | DMA/2025-26/OW/WORK_INDENT48950 | ST | 18.90 |
| 4 | DMA/2025-26/RD/WORK_INDENT48943 | CAT-II(A) | 25.00 |
| 5 | DMA/2025-26/RD/WORK_INDENT48945 | OTHERS | 21.00 |
| 6 | DMA/2025-26/RD/WORK_INDENT48946 | OTHERS | 18.00 |
| 7 | DMA/2025-26/RD/WORK_INDENT48947 | SC | 5.00 |
| 8 | DMA/2025-26/BD/WORK_INDENT48948 | CAT-I | 8.20 |
| 9 | DMA/2025-26/OW/WORK_INDENT48984 | OTHERS | 3.15 |
| 10 | DMA/2025-26/RD/WORK_INDENT48992 | OTHERS | 4.98 |
| 11 | DMA/2025-26/OW/WORK_INDENT48991 | OTHERS | 3.10 |

ಸಹಿ/-(ಶ್ರೀಮಹಂತೇಶ ಹೆಚ್ ಬೀಳಗಿ)
ಮುಖ್ಯಾಧಿಕಾರಿ
ಪುರಸಭೆ ಲಕ್ಷ್ಮೇಶ್ವರ

ಸಹಿ/- (ಶ್ರೀಮತಿ ಯಲ್ಲವ್ವ ಗಂ ದುರಗಣ್ಣವರ)
ಅಧ್ಯಕ್ಷರು
ಪುರಸಭೆ ಲಕ್ಷ್ಮೇಶ್ವರ

ವಾ.ಸಾ.ಇ/ಗದಗ/305/ದೇಶಪಾಂಡೆಪಬ್ಲಿಸಿಟಿ/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka